
# ಸರ್ಕಾರದ ವೈಫಲ್ಯದಿಂದ ತಮಿಳುನಾಡಿನಿಂದ ಒತ್ತಡ; ಬೊಮ್ಮಾಯಿ

• ಉದಯವಾಹಿನಿ, ಬೆಂಗಳೂರು

ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಮತ್ತು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ನೇತೃತ್ವದ ಬಿಜೆಪಿ ಸಂಸದರ ನಿಯೋಗ ನವ ದೆಹಲಿಯಲ್ಲಿ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಅವರನ್ನು ಭೇಟಿ ಮಾಡಿ ಪ್ರಸ್ತುತ ರಾಜ್ಯದ ನೀರಾವರಿ ವಿಷಯಗಳ ಕುರಿತು ಚರ್ಚೆ ನಡೆಸಿದರು.

ಈ ಸಂದರ್ಭದಲ್ಲಿ ಮಾಜಿ ಸಿಎಂ ಹಾಗೂ ಸಂಸದ ಜಗದೀಶ ಶೆಟ್ಟರ, ಗೋವಿಂದ ಕಾರಜೋಳ, ವಿಶ್ವೇಶ್ವರ ಹೆಗಡೆ ಕಾಗೇರಿ, ಪಿ.ಸಿ. ಮೋಹನ್, ಪಿ.ಸಿ.ಗದ್ದಿಗೌಡರ ಹಾಜರಿದ್ದರು. ರಾಜ್ಯದಲ್ಲಿನ ತೀವ್ರ ಕುಡಿಯುವ ನೀರಿನ ಕೊರತೆ ಮತ್ತು ಬರಗಾಲದಂತಹ ಪರಿಸ್ಥಿತಿಯ ಬಗ್ಗೆ ನಿಯೋಗ ಮಾಹಿತಿ ನೀಡಿತು. ನವದೆಹಲಿಯಲ್ಲಿ ಸುದ್ದಿಗಾರರನ್ನುದ್ದೇಶಿಸಿ ಮಾತನಾಡಿದ ಬೊಮ್ಮಾಯಿ, ರಾಜ್ಯದ ಕಾವೇರಿ ಜಲಾನಯನ ಪ್ರದೇಶದ ಜಲಾಶಯಗಳಲ್ಲಿ ಲಭ್ಯವಿರುವ ನೀರು ಕುಡಿಯುವ ಉದ್ದೇಶಕ್ಕಾಗಿ ಮಾತ್ರ ಎಂದು ಹೇಳಿದರು. ಇಂತಹ ಸಂದರ್ಭಗಳಲ್ಲಿ, ತಮಿಳುನಾಡು ನೀರು ಬಿಡುಗಡೆ ಮಾಡಲು ರಾಜ್ಯದ ಮೇಲೆ ಒತ್ತಡ ಹೇರುತ್ತಿದೆ. ಇದು ದೀರ್ಘಕಾಲದ ವಿವಾದವಾಗಿದ್ದರೂ, ರಾಜ್ಯದ ಪ್ರತಿನಿಧಿಗಳು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ (ಸಿಡಬ್ಲ್ಯುಎಂಎ) ಮುಂದೆ ಕರ್ನಾಟಕದ ವಾಸ್ತವಿಕ ಸ್ಥಿತಿಯನ್ನು ಬಲವಾಗಿ ಪ್ರಸ್ತುತಪಡಿಸಲು ವಿಫಲರಾಗಿದ್ದಾರೆ. ಈ ವೈಫಲ್ಯದಿಂದಾಗಿ, ತಮಿಳುನಾಡು ನೀರಿಗಾಗಿ ನಮ್ಮ ಮೇಲೆ ಪದೇ ಪದೇ ಒತ್ತಡ ಹೇರುತ್ತಿದೆ. ನಾನು ಈ ವಿಷಯದ ಬಗ್ಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ಚರ್ಚಿಸಿದ್ದೇನೆ ಮತ್ತು ಅವರು ಅದೇ ಅಭಿಪ್ರಾಯವನ್ನು ಹಂಚಿಕೊಂಡಿದ್ದಾರೆ, ಎಂದು ಬೊಮ್ಮಾಯಿ ಹೇಳಿದರು.


ಉದಯವಾಹಿನಿ ಚಿತ್ರ

# ಆಧಾರ್ ದೃಢೀಕರಣ ವ್ಯವಸ್ಥೆಯ ಭದ್ರತೆ ಬಲಪಡಿಸಲು HMS ಉನ್ನತೀಕರಣ: ಪ್ರಿಯಾಂಕ್ ಖರ್ಗೆ!

• ಉದಯವಾಹಿನಿ, ಬೆಂಗಳೂರು

ರಾಜ್ಯದ ವಿವಿಧ ಸರ್ಕಾರಿ ಇಲಾಖೆಗಳಲ್ಲಿ ಬಳಸಲಾಗುತ್ತಿರುವ ಆಧಾರ್ ದೃಢೀಕರಣ ವ್ಯವಸ್ಥೆಯ ಭದ್ರತೆ ಮತ್ತು ವಿಶ್ವಾಸಾರ್ಹತೆಯನ್ನು ಇನ್ನಷ್ಟು ಬಲಪಡಿಸುವ ಉದ್ದೇಶದಿಂದ ಹಾರ್ಡ್‌ವೇರ್ ಸೆಕ್ಯುರಿಟಿ ಮಾಡ್ಯೂಲ್ ಅನ್ನು ಉನ್ನತೀಕರಿಸುವ ಕಾರ್ಯವನ್ನು ಕರ್ನಾಟಕ ಸರ್ಕಾರ ಕೈಗೊಂಡಿದೆ.

ಇದು ಸಾಮಾನ್ಯ ನಿರ್ವಹಣಾ ಕಾರ್ಯವಲ್ಲ ರಾಜ್ಯದ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯವನ್ನು ಮತ್ತಷ್ಟು ಸುರಕ್ಷಿತ, ವಿಶ್ವಾಸಾರ್ಹ ಹಾಗೂ ಭವಿಷ್ಯದ ಅಗತ್ಯಗಳಿಗೆ ಸಜ್ಜುಗೊಳಿಸುವ ತಾಂತ್ರಿಕ ಸುಧಾರಣೆಯಾಗಿದೆ ಎಂದು ಗೃಹ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ-ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

ನಾಗರಿಕ ಸೇವೆಗಳ ಪರಿಣಾಮಕಾರಿ ವಿತರಣೆಗೆ ಸುರಕ್ಷಿತ ಡಿಜಿಟಲ್ ವ್ಯವಸ್ಥೆಗಳು ಅತ್ಯಗತ್ಯ. ಸರ್ಕಾರದ ಪ್ರಮುಖ ಡಿಜಿಟಲ್ ಮೂಲಸೌಕರ್ಯಗಳನ್ನು ಅತ್ಯಾಧುನಿಕ ಭದ್ರತಾ ಮಾನದಂಡಗಳಿಗೆ ಅನುಗುಣವಾಗಿ ನಿರಂತರವಾಗಿ ಬಲಪಡಿಸುವ ಕಾರ್ಯವನ್ನು ನಾವು ಕೈಗೊಳ್ಳುತ್ತಿದ್ದೇವೆ, ಎಂದು ಸಚಿವ ಪ್ರಿಯಾಂಕ್ ಖರ್ಗೆ ಮಾಹಿತಿ ನೀಡಿದ್ದಾರೆ.

ಆಧಾರ್ ದೃಢೀಕರಣ ಸೇವೆಯಲ್ಲಿ ಬಳಸುವ ಎನ್‌ಕ್ರಿಪ್ಷನ್ ಕೀಗಳನ್ನು ಸುರಕ್ಷಿತವಾಗಿ ನಿರ್ವಹಿಸುವ ಪ್ರಮುಖ ವ್ಯವಸ್ಥೆಯಾದ ಹೆಚ್.ಎಸ್.ಎಂ ಮೂಲಕ ರಾಜ್ಯದ ವಿವಿಧ ಸರ್ಕಾರಿ ಇಲಾಖೆಗಳಲ್ಲಿ ಪ್ರತಿದಿನ ಸುಮಾರು 10 ರಿಂದ 12 ಲಕ್ಷ ಆಧಾರ್ ದೃಢೀಕರಣ ವ್ಯವಹಾರಗಳು ನಡೆಯುತ್ತಿವೆ.

# ಮಾಜಿ ಸಚಿವ ವಿನಯ್ ಕುಲಕರ್ಣಿಗೆ ಬಿಗ್ ರಿಲೀಫ್

• ಉದಯವಾಹಿನಿ, ಬೆಂಗಳೂರು

ಉದಯವಾಹಿನಿ ಚಿತ್ರ



ಧಾರವಾಡದ ಹೈಪ್ರೊಫೈಲ್ ಮರ್ಡರ್ ಕೇಸ್ ನಲ್ಲಿ ಮಾಜಿ ಸಚಿವ ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿಗೆ ಇಂದು ಶುಕ್ರವಾರ ಬಿಗ್ ರಿಲೀಫ್ ಸಿಕ್ಕಿದೆ. ಬಿಜೆಪಿ ಮುಖಂಡ ಯೋಗೀಶ್ ಗೌಡ ಕೊಲೆ ಪ್ರಕರಣದಲ್ಲಿ ಹೈಕೋರ್ಟ್ ಜಾಮೀನು ನೀಡಿದೆ. ಪಕಣದಲ್ಲಿ ಜೀವಾವಧಿ ಶಿಕ್ಷೆಗೆ ಗುರಿಯಾಗಿದ್ದ ವಿನಯ್ ಕುಲಕರ್ಣಿ ತಮಗೆ ವಿಧಿಸಿದ್ದ ಶಿಕ್ಷೆಗೆ ತಡೆ ಕೋರಿ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರು. ಜನಪ್ರತಿನಿಧಿಗಳ ಕೋರ್ಟ್ ವಿಧಿಸಿದ್ದ ಜೀವಾವಧಿ ಶಿಕ್ಷೆಗೆ ತಡೆಯಾಜ್ಞೆ ಮತ್ತು ಜಾಮೀನು ನೀಡುವಂತೆ ಹೈಕೋರ್ಟ್ ಇಂದು ಮಹತ್ವದ ಮಧ್ಯಂತರ ತೀರ್ಪು ನೀಡಿದೆ.

ವಿನಯ್ ಕುಲಕರ್ಣಿ ಸೇರಿದಂತೆ 10 ಆರೋಪಿಗಳಿಗೆ ಹೈಕೋರ್ಟ್ ಜಾಮೀನು ಮಂಜೂರು ಮಾಡಿದೆ. ಚನ್ನಕೇಶವ ಟಿಂಗರಿಕರ್‌ಗೂ ಜಾಮೀನು ದೊರೆತಿದೆ.

ವಿನಯ್ ಕುಲಕರ್ಣಿಗೆ ಬಿಗ್ ರಿಲೀಫ್ ಸಿಕ್ಕಿದ್ದು, ಜೀವಾವದಿ ಶಿಕ್ಷೆಗೆ ಹೈಕೋರ್ಟ್ ತಡೆ ನೀಡಿದೆ. ಶಿಕ್ಷೆ ಅಮಾನತನಲ್ಲಿಟ್ಟು ಜಾಮೀನು ಮಂಜೂರು ಮಾಡಿದೆ. ಐದು ಲಕ್ಷ ಬಾಂಡ್ ಹಾಗೂ ಇಬ್ಬರ ಶ್ಯೂರಿಟಿ ಮೇರೆಗೆ ಜಾಮೀನು ನೀಡಲಾಗಿದೆ. ನ್ಯಾಯಮೂರ್ತಿ ಬಸವರಾಜ್ ಹಾಗೂ ಮೊಹಮ್ಮದ್ ನವಾಜ್ ಅವರ ವಿಭಾಗೀಯ ಪೀಠ ಮಹತ್ವದ ಆದೇಶ ನೀಡಿದೆ. ಇದರಿಂದ ಅವರ ಶಾಸಕ ಸ್ಥಾನಕ್ಕೆ ಮತ್ತೆ ಜೀವ ಸಿಕ್ಕಿದೆ.

# ಸಿಎಂ ವಿಜಯ್ ಭೇಟಿ ಮುಂದೂಡಿಕೆ: ಸಿಎಂ ಡಿಕೆಶಿವಕುಮಾರ್

## ತಮಿಳು ನಾಡಿಗೆ ಹೆಚ್ಚಿನ ನೀರು ಬಿಟ್ಟಿಲ್ಲ, ಸಹಜವಾಗಿ ಹರಿದುಹೋಗುವ ನೀರು ತಮಿಳು ನಾಡಿಗೆ ಹೋಗುತ್ತಿದೆಯಷ್ಟೆ ಎಂದು ಸ್ಪಷ್ಟಪಡಿಸಿದರು

• ಉದಯವಾಹಿನಿ, ಬೆಂಗಳೂರು

ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಇತ್ತೀಚೆಗೆ ನೀಡಿರುವ ನಿರ್ದೇಶನದ ಹಿನ್ನೆಲೆಯಲ್ಲಿ ರಾಜ್ಯದಲ್ಲಿನ ಕಾವೇರಿ ಜಲ ಪರಿಸ್ಥಿತಿಯನ್ನು ಪರಿಶೀಲಿಸಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಶುಕ್ರವಾರ ಉನ್ನತ ಮಟ್ಟದ ಸಭೆ ನಡೆಸಿದರು.

ಕಾವೇರಿ ಜಲ ವಿವಾದ ಹಾಗೂ ಈ ಸಂಬಂಧ ರಾಜ್ಯ ಸರ್ಕಾರ ಕೈಗೊಳ್ಳಬೇಕಾದ ಮುಂದಿನ ಕ್ರಮಗಳ ಕುರಿತು ಚರ್ಚಿಸಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಆಗಸ್ಟ್ 2ರಂದು ಬೆಂಗಳೂರಿನ ತಮ್ಮ ಅಧಿಕೃತ ನಿವಾಸ ಕೃಷ್ಣಾದಲ್ಲಿ ಸರ್ವಪಕ್ಷ ಸಭೆ ಕರೆಯಲಾಗಿದೆ ಎಂದು ತಿಳಿಸಿದರು. ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಕರ್ನಾಟಕದ ಮನವಿಯನ್ನು ತಿರಸ್ಕರಿಸಿ, ಕಾವೇರಿ ನೀರು ನಿಯಂತ್ರಣ ಸಮಿತಿ ನೀಡಿದ್ದ ಶಿಫಾರಸನ್ನು ಎತ್ತಿಹಿಡಿದು, ತಮಿಳುನಾಡಿಗೆ 15 ದಿನಗಳ ಕಾಲ ಪ್ರತಿದಿನ 3,500 ಕ್ಯೂಸೆಕ್ ನೀರು ಬಿಡುಗಡೆ ಮಾಡುವಂತೆ ನಿರ್ದೇಶನ ನೀಡಿದ ಬೆನ್ನಲ್ಲೇ ಈ ಸಭೆ ನಡೆಯುತ್ತಿದೆ. ಸಭೆಗೆ ಮಾಜಿ ಮುಖ್ಯಮಂತ್ರಿಗಳು, ಸಂಸದರು, ಹಾಗೂ ಕಾವೇರಿ ಜಲಾನಯನ ಪ್ರದೇಶದ ಶಾಸಕರನ್ನು ಆಹ್ವಾನಿಸಲಾಗಿದೆ. ಸಭೆಯಲ್ಲಿ ಕಾವೇರಿ ನೀರಿನ ಹಂಚಿಕೆ ಕುರಿತು ರಾಜ್ಯದ ಮುಂದಿನ ಕಾನೂನು ಹಾಗೂ ರಾಜಕೀಯ ಹೋರಾಟದ ರೂಪುರೇಷೆಗಳ ಕುರಿತು ಚರ್ಚಿಸಲಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದರು.

ಸಭೆಯಲ್ಲಿ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್, ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ, ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಪೊಲೀಸ್ ಮಹಾನಿರ್ದೇಶಕ ಸಲೀಂ ಅಹ್ಮದ್, ಹಿರಿಯ ಅಧಿಕಾರಿಗಳು ಹಾಗೂ ಪೊಲೀಸ್ ಅಧಿಕಾರಿಗಳು ಭಾಗವಹಿಸಿದ್ದರು. ದೆಹಲಿಯಲ್ಲಿ ನಡೆದ ಸಭೆಯಲ್ಲಿ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಕಾವೇರಿ ನೀರು ನಿಯಂತ್ರಣ ಸಮಿತಿ ಶಿಫಾರಸನ್ನು ಎತ್ತಿಹಿಡಿದು, ಕರ್ನಾಟಕವು ತಮಿಳುನಾಡಿಗೆ 15 ದಿನಗಳ ಕಾಲ ಪ್ರತಿದಿನ 3,500 ಕ್ಯೂಸೆಕ್ ನೀರನ್ನು ಬಿಡುಗಡೆ ಮಾಡಬೇಕು ಎಂದು ನಿರ್ದೇಶಿಸಿತ್ತು. ಒಟ್ಟು 4 ಟಿಎಂಸಿ ನೀರು ಬಿಡುಗಡೆ ಮಾಡಲು ಶಿಫಾರಸು ಮಾಡಲಾಗಿದೆ. ಆಗಸ್ಟ್ 3ರಂದು ನಿಗದಿಯಾಗಿದ್ದ ಸಭೆಯನ್ನು ಸದ್ಯಕ್ಕೆ ಮುಂದೂಡುವಂತೆ ಮನವಿ ಮಾಡಿರುವುದಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ತಮಿಳುನಾಡು ಮುಖ್ಯಮಂತ್ರಿ ಕಚೇರಿಯಿಂದ ನಮ್ಮ ಮುಖ್ಯ ಕಾರ್ಯದರ್ಶಿಗೆ ಕರೆ ಬಂದಿತ್ತು. ಮುಖ್ಯಮಂತ್ರಿ ನಮ್ಮನ್ನು ಭೇಟಿ ಮಾಡಿ ವಿವಿಧ ವಿಷಯಗಳ ಬಗ್ಗೆ ಚರ್ಚಿಸಲು ಬಯಸಿದ್ದಾರೆ ಎಂದು ತಿಳಿಸಲಾಗಿತ್ತು. ಆ ಮನವಿಯನ್ನು ನಾವು ಒಪ್ಪಿಕೊಂಡು ಆಗಸ್ಟ್ 3ರಂದು ಸಭೆಯನ್ನು ನಿಗದಿಪಡಿಸಿದ್ದೆವು.ಆದರೆ, ಇಂದು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ನೀಡಿರುವ ಆದೇಶದ ಹಿನ್ನೆಲೆಯಲ್ಲಿ ಈಗಿನ ವಾತಾವರಣ ಸೂಕ್ತವಾಗಿಲ್ಲ ಎಂದು ನನಗೆ ಅನಿಸುತ್ತಿದೆ. ಆದ್ದರಿಂದ, ಸಭೆಯನ್ನು ಸ್ವಲ್ಪ ಕಾಲ ಮುಂದೂಡುವಂತೆ ತಮಿಳುನಾಡು ಮುಖ್ಯಮಂತ್ರಿಗೆ ಮನವಿ ಮಾಡಿದ್ದೇನೆ. ಎರಡೂ ರಾಜ್ಯಗಳ ನಡುವೆ ಸೌಹಾರ್ದಯುತ ವಾತಾವರಣ ಇರಬೇಕು ಎಂಬುದು ನನ್ನ ಆಶಯ. ಯಾವುದೇ ರೀತಿಯ ಕಹಿ ಭಾವನೆಗಳು ಮೂಡಬಾರದು. ನೀರಿನ ಸಮಸ್ಯೆಗೆ ಸಂಬಂಧಿಸಿದ ಯಾವುದೇ ಪರಿಹಾರವೂ ಎರಡೂ ರಾಜ್ಯಗಳಿಗೆ ಅನುಕೂಲವಾಗಬೇಕು. ಇದಕ್ಕೆಲ್ಲ ಮಳೆ ದೇವರ ಕೃಪೆಯೇ ಮುಖ್ಯ. ಮಳೆಯಾದರೆ ಸಮಸ್ಯೆ ಬಹುತೇಕ ಬಗೆಹರಿಯುತ್ತದೆ, ಎಂದು ಹೇಳಿದರು. ಮೇಕೆದಾಟು ಯೋಜನೆ ಕುರಿತು ಮಾತನಾಡಿದ ಅವರು, ಸುಪ್ರೀಂ ಕೋರ್ಟ್ ಈಗಾಗಲೇ ಸ್ಪಷ್ಟವಾದ ತೀರ್ಪು ನೀಡಿದೆ. ನಾವು ನ್ಯಾಯಾಲಯದ ಆದೇಶವನ್ನು ಪಾಲಿಸಲೇಬೇಕು. ಯಾವುದೇ ಆದೇಶವನ್ನು ಉಲ್ಲಂಘಿಸುವ ಉದ್ದೇಶ ನಮ್ಮದಲ್ಲ.



ಉದಯವಾಹಿನಿ ಚಿತ್ರ

ಅಷ್ಟರೊಳಗೆ ತಮಿಳುನಾಡು ಮುಖ್ಯಮಂತ್ರಿಗೆ ಸಭೆಯನ್ನು ಮುಂದೂಡುವಂತೆ ಮನವಿ ಮಾಡಿದ್ದೇನೆ. ಎರಡೂ ರಾಜ್ಯಗಳ ಹಿತದೃಷ್ಟಿಯಿಂದ ಶಾಂತ, ಸೌಹಾರ್ದಯುತ ಮತ್ತು ಉತ್ತಮ ವಾತಾವರಣದಲ್ಲಿ ಭೇಟಿಯಾಗಿ ಚರ್ಚಿಸುವುದು ಸೂಕ್ತ, ಎಂದು ಹೇಳಿದರು.
- ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

**1** ತಮಿಳುನಾಡಿಗೆ15 ದಿನಗಳ ಕಾಲ

**2** ಪ್ರತಿದಿನ 3,500 ಕ್ಯೂಸೆಕ್ ನೀರು

**3** ಒಟ್ಟು 4 ಟಿಎಂಸಿ ನೀರು ಬಿಡುಗಡೆ

ಮೇಕೆದಾಟು ಜಲಾಶಯ ಯೋಜನೆಯಿಂದ ಕರ್ನಾಟಕಕ್ಕಿಂತ ತಮಿಳುನಾಡಿಗೇ ಹೆಚ್ಚಿನ ಲಾಭವಾಗಲಿದೆ. ವಿದ್ಯುತ್ ಉತ್ಪಾದನೆಯ ಅಂಶವನ್ನು ಹೊರತುಪಡಿಸಿದರೆ, ಈ ಯೋಜನೆಯಿಂದ ತಮಿಳುನಾಡಿಗೆ ಹೆಚ್ಚು ಪ್ರಯೋಜನವಾಗುತ್ತದೆ. ಎಂದು ತಿಳಿಸಿದರು.
-ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

### ಸರ್ವಪಕ್ಷ ಸಭೆ

ರಾಜಕೀಯ ಪಕ್ಷಗಳೊಂದಿಗೆ ಸಮಾಲೋಚನೆ ಕುರಿತು ಪ್ರತಿಕ್ರಿಯಿಸಿದ ಅವರು, ರಾಜ್ಯದ ಹಿತದೃಷ್ಟಿಯಿಂದ ನಮ್ಮ ಪಕ್ಷದ ನಾಯಕರು ಹಾಗೂ ಪ್ರತಿಪಕ್ಷಗಳನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವುದು ನನ್ನ ಕರ್ತವ್ಯ.

ರಾಜಕೀಯ ಭಿನ್ನಾಭಿಪ್ರಾಯಗಳಿದ್ದರೂ, ರಾಜ್ಯದ ಹಿತಾಸಕ್ತಿಯ ವಿಷಯದಲ್ಲಿ ಎಲ್ಲರೂ ನಮ್ಮೊಂದಿಗೆ ಸಹಕರಿಸುತ್ತಿದ್ದಾರೆ. ಇದೇ ಕಾರಣಕ್ಕೆ ನಾಡಿದ್ದು ಸರ್ವಪಕ್ಷ ಸಭೆ ಕರೆದಿದ್ದೇವೆ.

## ರಾಜ್ಯದಲ್ಲಿ ಒಳಹರಿವು ಚೇತರಿಕೆ, ಸಮಾಧಾನಕರ ವಿಚಾರ

ಕಾವೇರಿ ಪ್ರಾಧಿಕಾರದವರಿಗೆ, ತಮಿಳುನಾಡಿನವರಿಗೆ, ಮಾಧ್ಯಮವರರು ಸೇರಿದಂತೆ ಎಲ್ಲರಿಗೂ ಪ್ರತಿ ಅಣೆಕಟ್ಟಿನ ಒಳಹರಿವಿನ ಮಾಹಿತಿ ಇದ್ದು, ಹಾರಂಗಿ ಜಲಾಶಯ 95%, ಕಬಿನಿ 83%, ಕೆಆರ್‌ಎಸ್ 36%, ಹೇಮಾವತಿಯಲ್ಲಿ 67% ನೀರು ಶೇಖರಣೆಯಾಗಿದೆ. ಈ ಮಾಹಿತಿಯನ್ನು ಯಾರಿಂದಲೂ ಮುಚ್ಚಿಡಲು ಸಾಧ್ಯವಿಲ್ಲ. ಪ್ರತಿನಿತ್ಯ 3,500 ಕ್ಯೂಸೆಕ್ ನಂತೆ 15 ದಿನಕ್ಕೆ 4.5 ಟಿಎಂಸಿ ನೀರು ಹರಿಸಲು ಆದೇಶ ನೀಡಲಾಗಿದೆ. ರಾಜ್ಯದಲ್ಲಿ ಒಳಹರಿವು ಚೇತರಿಕೆ ಕಂಡಿರುವುದು ಸಮಾಧಾನಕರ ವಿಚಾರ. ನಮ್ಮ ಅಣೆಕಟ್ಟುಗಳ ಒಳಹರಿವು 25 ಸಾವಿರ ಕ್ಯೂಸೆಕ್ ನಷ್ಟಿದ್ದು, ಅದರಲ್ಲಿ 3,500 ಕ್ಯೂಸೆಕ್ ನೀರು ಬಿಡಲು ಸೂಚಿಸಿದ್ದಾರೆ. ಈ ಮಾಹಿತಿಗಳನ್ನು ಸಮಿತಿ ಹಾಗೂ ಪ್ರಾಧಿಕಾರ ಎರಡೂ ತನ್ನ ಆದೇಶದಲ್ಲಿ ಸೂಚಿಸಿವೆ. ಆದರೂ ನಮ್ಮ ರಾಜ್ಯದ ರೈತರ ಹಿತ ಕಾಪಾಡುವುದು ಸರಕಾರದ ಕರ್ತವ್ಯ ನಾವು ನಮ್ಮ ರಾಜ್ಯದ ರೈತರ ರಕ್ಷಣೆ ಮಾಡುತ್ತೇವೆ. ನಾವು ಶಾಸಕರನ್ನು ಕರೆದು ಕುಡಿಯುವ ನೀರು ಹಾಗೂ ಕೆರೆಗಳನ್ನು ತುಂಬಿಸುವ ರಕ್ಷಣೆ ನೀಡಿದ್ದೇವೆ. ಬಂಗಾರಪ್ಪರ ಕಾಲದಿಂದ ಇಲ್ಲಿಯವರೆಗೂ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದಾಗೆಲ್ಲ ನಾವು ರಾಜ್ಯದ ಹಿತಕ್ಕೆ ಅಗತ್ಯ ರಕ್ಷಣೆ ನೀಡಲು ಬದ್ಧತೆ ತೋರಿದ್ದೇವೆ. ಈಗಲೂ ನಾವು ನಮ್ಮ ಕರ್ತವ್ಯಕ್ಕೆ ಬದ್ಧರಾಗಿದ್ದೇವೆ ಎಂದರು.



# ಮಲೆನಾಡು ಸೇರಿದಂತೆ ರಾಜ್ಯದ ಹಲವೆಡೆ ಭಾರಿ ಮಳೆ: ಜಲಾಶಯಗಳ ಒಳಹರಿವು ಹೆಚ್ಚಳ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಮಲೆನಾಡು ಪ್ರದೇಶಗಳಲ್ಲಿ ಗುರುವಾರ ಭಾರಿ ಮಳೆಯಾಗಿದೆ. ಕೊಡಗು, ದಕ್ಷಿಣ ಕನ್ನಡ ಮತ್ತು ಶಿವಮೊಗ್ಗದ ಕೆಲವು ಭಾಗಗಳಲ್ಲಿ ಕಳೆದ 24 ಗಂಟೆಗಳಲ್ಲಿ ಎಂಟು ಸೆಂ.ಮೀ.ಗಿಂತ ಹೆಚ್ಚು ಮಳೆಯಾಗಿದೆ.

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಮೇಲ್ವಿಚಾರಣಾ ಕೇಂದ್ರದ ಹವಾಮಾನ ವರದಿಯ ಪ್ರಕಾರ, ರಾಜ್ಯದ ಮಳೆ ಮಾಪಕ ಕೇಂದ್ರಗಳಲ್ಲಿ ಶೇ. 36 ರಷ್ಟು ಕಳೆದ 24 ಗಂಟೆಗಳಲ್ಲಿ ಕನಿಷ್ಠ 2.5 ಮಿಮೀ ಮಳೆಯಾಗಿದ್ದು, ದಕ್ಷಿಣ ಕನ್ನಡದ ಬಳಂಜದಲ್ಲಿ 103 ಮಿಮೀ ಮಳೆಯಾಗಿದೆ. ಹಾಸನ ಜಿಲ್ಲೆಯ ಹೊಗದಹಳ್ಳದಲ್ಲಿ 92 ಮಿಮೀ ಮಳೆಯಾಗಿದ್ದರೆ, ಶಿವಮೊಗ್ಗ ಜಿಲ್ಲೆಯ ಆಗುಂಬೆಯಲ್ಲಿ 85 ಮಿಮೀ ಮಳೆಯಾಗಿದೆ.

ಜುಲೈ 31 ಮತ್ತು ಆಗಸ್ಟ್ 1 ರಂದು ಕರಾವಳಿ ಕರ್ನಾಟಕ ಮತ್ತು ದಕ್ಷಿಣ ಒಳನಾಡಿನಲ್ಲಿ ಅತಿ ಹೆಚ್ಚು ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಮುನ್ಸೂಚನೆ ನೀಡಿದೆ. ಆಗಸ್ಟ್ 1 ರಂದು ಉತ್ತರ ಒಳನಾಡಿನಲ್ಲಿ ಭಾರೀ ಮಳೆಯಾಗುವ ಎಚ್ಚರಿಕೆ ನೀಡಿದೆ.

ಜುಲೈ 31ರಂದು ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಬೆಳಗಾವಿ, ಬೀದರ್, ಕಲಬುರಗಿ, ಶಿವಮೊಗ್ಗ ಮತ್ತು ಚಿಕ್ಕಮಗಳೂರು ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ನೀಡಲಾಗಿದೆ, ಹಾಸನ, ಕೊಡಗು, ವಿಜಯಪುರ ಮತ್ತು ಯಾದಗಿರಿ ಜಿಲ್ಲೆಗಳ ಕೆಲವು ಭಾಗಗಳಲ್ಲಿಭಾರೀ ಮಳೆಯಾಗುವ ನಿರೀಕ್ಷೆಯಿದ್ದು ಯೆಲ್ಲೋ ಅಲರ್ಟ್ ನೀಡಲಾಗಿದೆ. ಆಲಮಟ್ಟಿ, ನಾರಾಯಣಪುರ, ಘಟಪ್ರಭಾ, ತುಂಗಭದ್ರ, ಹಾರಂಗಿ, ಹೇಮಾವತಿ, ಕಬಿನಿ, ಲಿಂಗನಮಕ್ಕಿ ಮತ್ತು ಸೂಪಾ ಅಣೆಕಟ್ಟುಗಳಿಗೆ ಗುರುವಾರ ಒಳಹರಿವು ಹೆಚ್ಚಾಗಿದೆ.

# 'BMIC ಬಹುದೊಡ್ಡ ಹಗರಣ' ಎಂದು ಹೈಕೋರ್ಟ್ ತರಾಟೆ

• ಉದಯವಾಹಿನಿ, ಬೆಂಗಳೂರು

ನಂದಿ ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಎಂಟರ್‌ಪ್ರೈಸಸ್ ಕೈಗೊಂಡಿರುವ ಬೆಂಗಳೂರು ಮೈಸೂರು ಮೂಲಸೌಕರ್ಯ ಕಾರಿಡಾರ್ ಯೋಜನೆಯನ್ನು ಹೈಕೋರ್ಟ್ ಅತಿದೊಡ್ಡ ಹಗರಣ ಎಂದು ಬಣ್ಣಿಸಿದ ಬೆನ್ನಲ್ಲೇ, ರಾಜ್ಯ ಸರ್ಕಾರವು 292 ಪುಟಗಳ ತೀರ್ಪು ಹಾಗೂ ಅದರ ಕಾನೂನು ಪರಿಣಾಮಗಳನ್ನು ಪರಿಶೀಲಿಸುತ್ತಿದ್ದು, ಮುಂದಿನ ಕ್ರಮದ ಬಗ್ಗೆ ಶೀಘ್ರದಲ್ಲೇ ನಿರ್ಧಾರ ಕೈಗೊಳ್ಳಲಿದೆ.ಹಿರಿಯ ಸರ್ಕಾರಿ ಅಧಿಕಾರಿಯೊಬ್ಬರು, ಹೈಕೋರ್ಟ್‌ನ ತೀರ್ಪನ್ನು ಸವಿಸ್ತಾರವಾಗಿ ಅಧ್ಯಯನ ಮಾಡಲಾಗುತ್ತಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ, ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರ ಅಧ್ಯಕ್ಷತೆಯಲ್ಲಿರುವ ಯೋಜನೆ ಕುರಿತ ಸಚಿವ ಸಂಪುಟ ಉಪ ಸಮಿತಿಯ ಕಾರ್ಯಚಟುವಟಿಕೆಗಳನ್ನೂ ಸರ್ಕಾರ ಪರಿಗಣಿಸಲಿದೆ ಎಂದು ಮೂಲಗಳು ತಿಳಿಸಿವೆ.

ಈ ಉಪ ಸಮಿತಿ ತನ್ನ ವರದಿಯನ್ನು ಅಂತಿಮ ಹಂತದಲ್ಲಿ ಸಿದ್ಧಪಡಿಸುತ್ತಿದೆ.

ಮೂಲಗಳ ಪ್ರಕಾರ, ಬಿಡದಿವರೆಗೆ ಉಳಿದಿರುವ ಸುಮಾರು 8 ಕಿ.ಮೀ. ರಸ್ತೆ ಕಾಮಗಾರಿಯನ್ನು ಪೂರ್ಣಗೊಳಿಸಿ ರಾಷ್ಟ್ರೀಯ ಹೆದ್ದಾರಿಗೆ ಸಂಪರ್ಕ ಕಲ್ಪಿಸಲು ಅನುಮತಿ ನೀಡುವ ಆಯ್ಕೆಯನ್ನೂ ಸರ್ಕಾರ ಪರಿಶೀಲಿಸಬಹುದು.

ಹೈಕೋರ್ಟ್ ನೀಡಿದ ತೀರ್ಪಿನಲ್ಲಿ, ಯೋಜನೆಗಾಗಿ 20,000 ಎಕರೆಗೂ ಅಧಿಕ ಭೂಮಿಯನ್ನು ಸ್ವಾಧೀನಪಡಿಸಿಕೊಂಡಿದ್ದರೂ, 23 ವರ್ಷಗಳಾದರೂ ಭೂಸ್ವಾಧೀನ ಪರಿಹಾರದ ಆದೇಶಗಳನ್ನು ಇನ್ನೂ ನೀಡಿಲ್ಲ ಎಂದು ಹೈಕೋರ್ಟ್ ತೀವ್ರ ಅಸಮಾಧಾನ ವ್ಯಕ್ತಪಡಿಸಿತ್ತು.

# ಆಗಸ್ಟ್ 13ರಂದು ಅಖಂಡ ಕರ್ನಾಟಕ ಬಂದ್; ವಾಟಾಳ್ ನಾಗರಾಜ್ ಘೋಷಣೆ

• ಉದಯವಾಹಿನಿ, ಬೆಂಗಳೂರು




ತಮಿಳುನಾಡಿಗೆ ಕಾವೇರಿ ನೀರು ಹಂಚಿಕೆ ವಿಚಾರದಲ್ಲಿ ಕಾವೇರಿ ಜಲ ನಿಯಂತ್ರಣ ಸಮಿತಿ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಆದೇಶ ವಿರೋಧಿಸಿ ವಿವಿಧ ಕನ್ನಡಪರ ಸಂಘಟನೆಗಳು ಕರ್ನಾಟಕ ಬಂದ್ ಗೆ ಕರೆ ನೀಡಿವೆ.

ಕರ್ನಾಟಕದಿಂದ ತಮಿಳುನಾಡಿಗೆ 15 ದಿನಗಳ ಕಾಲ ಪ್ರತಿದಿನ 3,500 ಕ್ಯೂಸೆಕ್ ನೀರು (ಒಟ್ಟು ಸುಮಾರು 4 ಟಿಎಂಸಿ) ಬಿಡುಗಡೆ ಮಾಡುವಂತೆ ನೀಡಿರುವ ಆದೇಶ ವಿರೋಧಿಸಿ, ವಿವಿಧ ಕನ್ನಡಪರ ಸಂಘಟನೆಗಳು ಆಗಸ್ಟ್ 13ರಂದು ಬೆಳಗ್ಗೆ 6 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ರಾಜ್ಯವ್ಯಾಪಿ ಬಂದ್‌ಗೆ ಕರೆ ನೀಡಿವೆ. ಕರ್ನಾಟಕ ರಾಜ್ಯ ಕನ್ನಡ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಹಾಗೂ ಮಾಜಿ ಶಾಸಕ ವಾಟಾಳ್ ನಾಗರಾಜ್, ರಾಜ್ಯದಾದ್ಯಂತ ವ್ಯಾಪಾರಿಗಳು, ವಿವಿಧ ಸಂಘ-ಸಂಸ್ಥೆಗಳು ಮತ್ತು ಸಾರ್ವಜನಿಕರು ಬಂದ್‌ಗೆ ಬೆಂಬಲ ನೀಡುವಂತೆ ಮನವಿ ಮಾಡಿದ್ದಾರೆ.

ಜಲಾಶಯಗಳಿಗೆ ಸಮರ್ಪಕ ನೀರಿನ ಹರಿವು ಇಲ್ಲದಿರುವುದು, ಕುಡಿಯುವ ನೀರು ಹಾಗೂ ನೀರಾವರಿಗೆ ತೊಂದರೆಯಾಗುವ ಆತಂಕದ ನಡುವೆ ತಮಿಳುನಾಡಿಗೆ ನೀರು ಬಿಡಲು ಸಾಧ್ಯವಿಲ್ಲ ಎಂದು ರೈತರು ಹಾಗೂ ಕನ್ನಡಪರ ಸಂಘಟನೆಗಳು ಪ್ರತಿಭಟನೆ ತೀವ್ರಗೊಳಿಸಿರುವ ಹಿನ್ನೆಲೆಯಲ್ಲಿ ಬಂದ್‌ಗೆ ಕರೆ ನೀಡಲಾಗಿದೆ. ಈ ಬಂದ್‌ಗೆ ರಾಜ್ಯದ ಜನರು ಸಂಪೂರ್ಣ ಸಹಕಾರ ನೀಡಬೇಕು. ಬೆಳಗಾವಿಯಿಂದ ಚಾಮರಾಜನಗರದವರೆಗೆ ಕರ್ನಾಟಕ ಬಂದ್ ಅನ್ನು ಯಶಸ್ವಿಗೊಳಿಸೋಣ ಎಂದು ಮನವಿ ಮಾಡಿದರು. ಕಾವೇರಿ ವಿಚಾರವನ್ನು ರಾಜಕೀಯ ಲಾಭಕ್ಕಾಗಿ ಬಳಸಿಕೊಳ್ಳುತ್ತಿರುವ ಎಲ್ಲಾ ರಾಜಕೀಯ ಪಕ್ಷಗಳ ವಿರುದ್ಧವೂ ಅವರು ವಾಗ್ದಾಳಿ ನಡೆಸಿದರು.

### ರಾಜ್ಯದ ರೈತರಿಗೆ ತೀವ್ರ ಅನ್ಯಾಯ

ಕರ್ನಾಟಕದಲ್ಲೇ ತೀವ್ರ ನೀರಿನ ಕೊರತೆ ಇರುವ ಸಂದರ್ಭದಲ್ಲಿ ತಮಿಳುನಾಡಿಗೆ ಕಾವೇರಿ ನೀರು ಬಿಡುಗಡೆ ಮಾಡಿದರೆ ರಾಜ್ಯದ ರೈತರಿಗೆ ತೀವ್ರ ಅನ್ಯಾಯವಾಗಲಿದೆ ಎಂದು ಕನ್ನಡಪರ ಸಂಘಟನೆಗಳು ಆಕ್ಷೇಪ ವ್ಯಕ್ತಪಡಿಸಿವೆ.

# ರಾಜ್ಯದ ಹಲವು ಚಿತ್ರಮಂದಿರಗಳಿಂದ 'ಜನ ನಾಯಗನ್' ಎತ್ತಂಗಡಿ!

• ಉದಯವಾಹಿನಿ, ಬೆಂಗಳೂರು

ತಮಿಳುನಾಡಿಗೆ ಕಾವೇರಿ ನೀರು ಬಿಡುಗಡೆ ಮಾಡುವುದನ್ನು ವಿರೋಧಿಸಿ ಕನ್ನಡ ಪರ ಸಂಘಟನೆಗಳು ನಡೆಸುತ್ತಿರುವ ಪ್ರತಿಭಟನೆಗಳು, ಕರ್ನಾಟಕದಲ್ಲಿ ನಟ ದಳಪತಿ ವಿಜಯ್ ಅವರ 'ಜನ ನಾಯಕನ್' ಚಿತ್ರದ ಮೇಲೆ ಪರಿಣಾಮ ಬೀರಿವೆ.ಮುನ್ನೆಚ್ಚರಿಕಾ ಕ್ರಮವಾಗಿ ಹಲವು ಚಿತ್ರಮಂದಿರಗಳು ವಿಜಯ್ ಅವರ ಚಿತ್ರದ ಪೋಸ್ಟರ್‌ಗಳನ್ನು ತೆರವುಗೊಳಿಸಿವೆ ಮತ್ತು ಚಿತ್ರ ಪ್ರದರ್ಶನವನ್ನು ಸ್ಥಗಿತಗೊಳಿಸಿವೆ. ರೈತರು ಹಾಗೂ ಕನ್ನಡ ಪರ ಸಂಘಟನೆಗಳ ಪ್ರತಿಭಟನೆಯ ಹಿನ್ನೆಲೆಯಲ್ಲಿ ರಾಜ್ಯದಾದ್ಯಂತ ಅನೇಕ ಚಿತ್ರಮಂದಿರಗಳು 'ಜನ ನಾಯಗನ್' ಚಿತ್ರದ ಪ್ರದರ್ಶನಗಳನ್ನು ರದ್ದುಗೊಳಿಸಿವೆ.

ಜುಲೈ 23ರಂದು ಬಿಡುಗಡೆಯಾದ 'ಜನ ನಾಯಗನ್' ಚಿತ್ರವು ಕರ್ನಾಟಕದಾದ್ಯಂತ ಸುಮಾರು 125 ರಿಂದ 150 ಚಿತ್ರಮಂದಿರಗಳಲ್ಲಿ (75ಕ್ಕೂ ಹೆಚ್ಚು ಸಿಂಗಲ್-ಸ್ಕ್ರೀನ್ ಚಿತ್ರಮಂದಿರಗಳು ಮತ್ತು ಸುಮಾರು 50 ಮಲ್ಟಿಪ್ಲೆಕ್ಸ್ ಸೇರಿದಂತೆ) ಬಿಡುಗಡೆಯಾಗಿತ್ತು. ಕಾವೇರಿ ಪ್ರತಿಭಟನೆಗಳು ತೀವ್ರಗೊಂಡಂತೆ, ಕಾನೂನು ಮತ್ತು ಸುವ್ಯವಸ್ಥೆಗೆ ಸಂಬಂಧಿಸಿದ ಸಮಸ್ಯೆಗಳನ್ನು ತಪ್ಪಿಸಲು ಹಲವು ಚಿತ್ರಮಂದಿರಗಳ ಮಾಲೀಕರು ಸ್ವಯಂಪ್ರೇರಣೆಯಿಂದ ಚಲನಚಿತ್ರ ಪ್ರದರ್ಶನಗಳನ್ನು ಸ್ಥಗಿತಗೊಳಿಸಿದ್ದಾರೆ. ಕೆಲವು ಚಿತ್ರಮಂದಿರಗಳ ಸಿಬ್ಬಂದಿ ಆವರಣದಲ್ಲಿದ್ದ ಪೋಸ್ಟರ್‌ಗಳು ಮತ್ತು ಬ್ಯಾನರ್‌ಗಳನ್ನು ಸಹ ತೆರವುಗೊಳಿಸಿದ್ದಾರೆ. ಬೆಂಗಳೂರಿನ ಊರ್ವಶಿ ಚಿತ್ರಮಂದಿರದಲ್ಲಿ, ಪೊಲೀಸರ ಸಲಹೆಯ ಮೇರೆಗೆ 'ಜನ ನಾಯಗನ್' ಚಿತ್ರದ ಪ್ರದರ್ಶನಗಳನ್ನು ಸ್ಥಗಿತಗೊಳಿಸಲಾಯಿತು.




ಚಿತ್ರಮಂದಿರದ ಸಿಬ್ಬಂದಿ ಚಿತ್ರದ ಪೋಸ್ಟರ್‌ಗಳು ಮತ್ತು ಕಟ್-ಔಟ್‌ಗಳನ್ನು ತೆರವುಗೊಳಿಸಿದ್ದಾರೆ ಹಾಗೂ ನಿಗದಿತ ಜನ ನಾಯಗನ್ ಪ್ರದರ್ಶನಗಳ ಬದಲಿಗೆ ಕನ್ನಡ ಚಲನಚಿತ್ರ 'ಕರಾವಳಿ'ಯನ್ನು ಪ್ರದರ್ಶಿಸಿದ್ದಾರೆ.

### ಮುನ್ನೆಚ್ಚರಿಕೆ ಕ್ರಮ

ಕರ್ನಾಟಕದಾದ್ಯಂತ ಕಾವೇರಿ ಪ್ರತಿಭಟನೆಗಳು ಮುಂದುವರಿದಿರುವ ಹಿನ್ನೆಲೆಯಲ್ಲಿ, ಯಾವುದೇ ಅಹಿತಕರ ಘಟನೆಗಳನ್ನು ತಡೆಯುವ ಮುನ್ನೆಚ್ಚರಿಕೆ ಕ್ರಮವಾಗಿ ಊರ್ವಶಿ ಚಿತ್ರಮಂದಿರದ ಹೊರಗೆ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ.

# ಶ್ರೀ ಜಯತೀರ್ಥರ ಜೀವನ ಮತ್ತು ಸಾಧನೆ ಧಾರ್ಮಿಕ ಪ್ರವಚನ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಶ್ರೀ ರಾಘವೇಂದ್ರ ಸೇವಾ ಸಮಿತಿ ಮತ್ತು ತಿರುಮಲ ತಿರುಪತಿ ದೇವಸ್ಥಾನಗಳು ಹಿಂದೂಧರ್ಮ ಪ್ರಚಾರ ಪರಿಷತ್ ಇವುಗಳ ಸಂಯುಕ್ತಾಶ್ರಯದಲ್ಲಿ ಆಗಸ್ಟ್ 1 ರಿಂದ 6ರ ವರೆಗೆ ಪ್ರತಿದಿನ ಸಂಜೆ 7-00ಕ್ಕೆ ಮ||ಶಾ||ಸಂ|| ಶ್ರೀ ಚಂದ್ರಶೇಖರ ಆಚಾರ್ಯರಿಂದ ಶ್ರೀ ಜಯತೀರ್ಥರ ಆರಾಧನೆ ಪ್ರಯುಕ್ತ ಶ್ರೀ ಜಯತೀರ್ಥರ ಜೀವನ ಮತ್ತು ಸಾಧನೆ ವಿಷಯವಾಗಿ ಧಾರ್ಮಿಕ ಪ್ರವಚನ ಏರ್ಪಡಿಸಿದೆ ಎಂದು ಟಿಟಿಡಿ ಹೆಚ್.ಡಿ.ಪಿ.ಪಿ. ಸಂಚಾಲಕರಾದ ಡಾ|| ಪಿ. ಭುಜಂಗರಾವ್ ತಿಳಿಸಿದ್ದಾರೆ. ಸ್ಥಳ : ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 6ನೇ ಅಡ್ಡರಸ್ತೆ, ಈಜುಕೊಳದ ಬಡಾವಣೆ, ಸುಧೀಂದ್ರನಗರ, ಮಲ್ಲೇಶ್ವರಂ, ಬೆಂಗಳೂರು-560003

# ಮುಕ್ತಾಯ ಹಂತದಲ್ಲಿ ಸ್ಯಾಟಲೈಟ್ ಟೌನ್ ರಿಂಗ್ ರಸ್ತೆ ಕಾಮಗಾರಿ; ಸಂಸತ್ತಿನಲ್ಲಿ ಗಡ್ಕರಿ ಮಾಹಿತಿ..!

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ನಗರದ ಸಂಚಾರ ದಟ್ಟಣೆಗೆ ದೊಡ್ಡ ಮಟ್ಟದ ಪರಿಹಾರ ನೀಡಲಿರುವ ಬಹುನಿರೀಕ್ಷಿತ ಸ್ಯಾಟಲೈಟ್ ಟೌನ್ ರಿಂಗ್ ರಸ್ತೆ ಯೋಜನೆ ಕಾಮಗಾರಿ ಭರದಿಂದ ಸಾಗುತ್ತಿದ್ದು, ಮುಕ್ತಾಯದ ಹಂತ ತಲುಪಿದೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ತಿಳಿಸಿದ್ದಾರೆ.

ಲೋಕಸಭೆಯಲ್ಲಿ ಬೆಂಗಳೂರು ಕೇಂದ್ರ ಕ್ಷೇತ್ರದ ಸಂಸದ ಪಿ.ಸಿ. ಮೋಹನ್ ಕೇಳಿದ ಲಿಖಿತ ಪ್ರಶ್ನೆಗೆ ಸಚಿವರು ಈ ಉತ್ತರ ನೀಡಿದ್ದಾರೆ. ಸುಮಾರು ರೂ.14,655 ಕೋಟಿ ವೆಚ್ಚದ 288 ಕಿ.ಮೀ ಉದ್ದದ ಸ್ಯಾಟಲೈಟ್ ಟೌನ್‌ರಿಂಗ್ ರಸ್ತೆ ಕಾಮಗಾರಿ ವೇಗವಾಗಿ ಸಾಗುತ್ತಿದ್ದು, ಎರಡು ಪ್ಯಾಕೇಜ್‌ಗಳ ಕಾಮಗಾರಿ ಪೂರ್ಣಗೊಂಡಿದೆ. ಇನ್ನೆರಡು ಪ್ಯಾಕೇಜ್‌ಗಳು ಅಂತಿಮ ಹಂತದಲ್ಲಿದ್ದು, ಉಳಿದ ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದು ಮಾಹಿತಿ ನೀಡಿದ್ದಾರೆ.

# 7,000 ವಿದ್ಯಾರ್ಥಿಗಳಿಗೆ ಸೋಂಕು; ವದಂತಿಗಳನ್ನು ತಳ್ಳಿಹಾಕಿದ KSAPS!

## ಎಚ್‌ಐವಿ ಕಡ್ಡಾಯ ಪರೀಕ್ಷೆಯ ಕುರಿತು ಸಾಮಾಜಿಕ ಜಾಲತಾಣಗಳು, ಸುದ್ದಿ ಮಾಧ್ಯಮಗಳು ಹಾಗೂ ಪತ್ರಿಕೆಗಳಲ್ಲಿ ತಪ್ಪು ಸಂದೇಶಗಳು ಹರಡುತ್ತಿವೆ

• ಉದಯವಾಹಿನಿ, ಬೆಂಗಳೂರು

ರಾಜ್ಯದಾದ್ಯಂತ ಕಾಲೇಜು ವಿದ್ಯಾರ್ಥಿಗಳಿಗೆ ಎಚ್‌ಐವಿ ಪರೀಕ್ಷೆಯನ್ನು ಕಡ್ಡಾಯಗೊಳಿಸಲಾಗಿದೆ ಎಂಬ ಸಾಮಾಜಿಕ ಜಾಲತಾಣಗಳ ವೈರಲ್ ಹೇಳಿಕೆಗಳು ಮತ್ತು ಮಾಧ್ಯಮ ವರದಿಗಳನ್ನು ಕರ್ನಾಟಕ ರಾಜ್ಯ ಏಡ್ಸ್ ನಿಯಂತ್ರಣ ಸೊಸೈಟಿ ಬಲವಾಗಿ ತಳ್ಳಿಹಾಕಿದೆ. ಕರ್ನಾಟಕದಲ್ಲಿ ಇತ್ತೀಚೆಗೆ 7,000 ವಿದ್ಯಾರ್ಥಿಗಳಿಗೆ ಎಚ್‌ಐವಿ ಸೋಂಕು ಇರುವುದು ದೃಢಪಟ್ಟಿದೆ ಎಂಬ ವದಂತಿಗಳನ್ನೂ ಸಂಸ್ಥೆಯು ನಿರಾಕರಿಸಿದ್ದು, ಅಂತಹ ವರದಿಗಳು 'ಆಧಾರರಹಿತ' ಎಂದಿದೆ.

ಕರ್ನಾಟಕದ 'ಏಡ್ಸ್ ತಡೆಗಟ್ಟುವಿಕೆ ಸೊಸೈಟಿಯ ಯೋಜನಾ ನಿರ್ದೇಶಕಿ ಪದ್ಮಾ ಬಸವಂತಪ್ಪ ಅವರು ವಿಡಿಯೋವೊಂದನ್ನು ಬಿಡುಗಡೆ ಮಾಡಿ, ಎಚ್‌ಐವಿ ಪರೀಕ್ಷೆ ಕಡ್ಡಾಯವು ಕಾನೂನುಬಾಹಿರವಾಗಿದೆ. ಬದಲಾಗಿ, ಡಿಜಿಟಲ್ ವೇದಿಕೆಗಳ ಮೂಲಕ ತಮ್ಮ ಎಚ್‌ಐವಿ ಸೋಂಕಿನ ಅಪಾಯವನ್ನು ಸ್ವಯಂ-ಪರಿಶೀಲಿಸಿಕೊಳ್ಳಲು ಮತ್ತು ಅಗತ್ಯವಿದ್ದರೆ ಪರೀಕ್ಷೆಗೆ ಒಳಗಾಗಲು ಸರ್ಕಾರ ಜನರನ್ನು ಪ್ರೋತ್ಸಾಹಿಸುತ್ತದೆ ಎಂದಿದ್ದಾರೆ.

ರಾಜ್ಯದಲ್ಲಿ ಎಚ್‌ಐವಿ ಹರಡುವಿಕೆಗೆ ಸಂಬಂಧಿಸಿದ ಪ್ರಸ್ತುತ ಅಂಕಿಅಂಶಗಳ ಬಗ್ಗೆ ಸ್ಪಷ್ಟನೆ ನೀಡುತ್ತಾ, ''ಸಂಕಲಕ್' ಪ್ರಕಾರ, ಕರ್ನಾಟಕದಲ್ಲಿ ಸೋಂಕಿತರ ಸಂಖ್ಯೆ 2,91,341 ರಷ್ಟಿದೆ. ಇವರಲ್ಲಿ 2,03,000 ಮಂದಿ ನಮ್ಮ ಸಂಪರ್ಕದಲ್ಲಿದ್ದು, ಚಿಕಿತ್ಸೆ ಪಡೆಯುತ್ತಿದ್ದಾರೆ. ಈ ಸಂಖ್ಯೆಯಲ್ಲಿ ಮೃತಪಟ್ಟವರು ಹಾಗೂ ಖಾಸಗಿ ವಲಯದಲ್ಲಿ ಚಿಕಿತ್ಸೆ ಪಡೆಯುತ್ತಿರುವವರೂ ಸೇರಿದ್ದಾರೆ. ಹೀಗಾಗಿ, ದತ್ತಾಂಶದಲ್ಲಿ 56,000 ದಷ್ಟು ವ್ಯತ್ಯಾಸ ಕಂಡುಬರುತ್ತಿದೆ' ಎಂದರು. ಆಧುನಿಕ ಜೀವನಶೈಲಿಯ ಬದಲಾವಣೆಗಳು ಮತ್ತು ಡಿಜಿಟಲ್ ವೇದಿಕೆಗಳಿಂದಾಗಿ, ಹೆಚ್ಚಿನ ಅಪಾಯದಲ್ಲಿರುವ ವ್ಯಕ್ತಿಗಳನ್ನು ಪತ್ತೆಹಚ್ಚುವುದು ಆರೋಗ್ಯ ಅಧಿಕಾರಿಗಳಿಗೆ ಹೆಚ್ಚು ಕಷ್ಟಕರವಾಗಿದೆ ಎಂದು ಯೋಜನಾ ನಿರ್ದೇಶಕರು ತಿಳಿಸಿದರು. 'ಡೇಟಿಂಗ್ ಆ್ಯಪ್‌ಗಳು ಮತ್ತು ಜನರನ್ನು ಭೇಟಿಯಾಗುವ ವರ್ಚುವಲ್ (ಆನ್‌ಲೈನ್) ವಿಧಾನಗಳಿಂದಾಗಿ ಇಂತಹ ವ್ಯಕ್ತಿಗಳನ್ನು ಗುರುತಿಸುವುದು ನಮಗೆ ಬಹಳ ಕಷ್ಟಕರವಾಗಿದೆ ಏಕೆಂದರೆ ಇವುಗಳಲ್ಲಿ ವ್ಯಕ್ತಿಗಳಿಗೆ ಪರಸ್ಪರರ ವಿಳಾಸಗಳು ತಿಳಿದಿರುವುದಿಲ್ಲ ಮತ್ತು ಅವರನ್ನು ಪತ್ತೆಹಚ್ಚಲು ನಮಗೆ ಸಾಧ್ಯವಾಗುವುದಿಲ್ಲ. ಆದ್ದರಿಂದ, ಜನರು ಸ್ವತಃ ತಮ್ಮ ಅಪಾಯದ ಮಟ್ಟವನ್ನು ಅರಿತುಕೊಂಡು ನಮ್ಮ ಕೇಂದ್ರಗಳನ್ನು ಸಂಪರ್ಕಿಸುವಂತೆ ಮಾಡಲು ಜಾಗೃತಿ ಮೂಡಿಸುವುದೊಂದೇ ನಮ್ಮ ಮುಂದಿರುವ ಏಕೈಕ ಮಾರ್ಗವಾಗಿದೆ' ಎಂದು ಅವರು ಹೇಳಿದರು. ಇದನ್ನು ಎದುರಿಸಲು, ಸಂಸ್ಥೆಯು ಕಿಖ ಕೋಡ್‌ಗಳು ಮತ್ತು ಮೊಬೈಲ್ ಅಪ್ಲಿಕೇಶನ್ ಅನ್ನು ಒಳಗೊಂಡಿರುವ ತಂತ್ರಜ್ಞಾನ-ಆಧಾರಿತ ಜಾಗೃತಿ ಅಭಿಯಾನವನ್ನು ಪರಿಚಯಿಸಿದೆ. 'ನಾವು '' ಅಪ್ಲಿಕೇಶನ್‌ಗಾಗಿ ಕೋಡ್ ಮೂಲಕ ಜಾಗೃತಿ ಮೂಡಿಸುತ್ತಿದ್ದೇವೆ. ಈ ಕೋಡ್ ಅನ್ನು ಸ್ಕ್ಯಾನ್ ಮಾಡುವ ಮೂಲಕ, ಬಳಕೆದಾರರು ಅಪಾಯದ ಮೌಲ್ಯಮಾಪನಕ್ಕೆ ಸಂಬಂಧಿಸಿದ ಪ್ರಶ್ನೆಗಳಿಗೆ ಉತ್ತರಿಸಬಹುದು. ಅಪಾಯದ ಸಾಧ್ಯತೆಯಿದೆ ಎಂದು ಗುರುತಿಸಲ್ಪಟ್ಟ ವ್ಯಕ್ತಿಯು ಅಪ್ಲಿಕೇಶನ್ ಮೂಲಕ ಸಲಹೆಗಾರರನ್ನು ಸಂಪರ್ಕಿಸಬಹುದು ಅಥವಾ ಪರೀಕ್ಷಾ ಕೇಂದ್ರಗಳನ್ನು ಪತ್ತೆಹಚ್ಚಬಹುದು.

**1** ಎಚ್‌ಐವಿ ಪರೀಕ್ಷೆ ಕಡ್ಡಾಯ

**2** ಸಂಖ್ಯೆ 2,91,341 ರಷ್ಟಿದೆ

**3** 56,000 ದಷ್ಟು ವ್ಯತ್ಯಾಸ


ಉದಯವಾಹಿನಿ ಚಿತ್ರ


### ಎಚ್‌ಐವಿ ಪತ್ತೆ

ಯಾವುದೇ ವ್ಯಕ್ತಿಯು ಕಡ್ಡಾಯವಾಗಿ ಪರೀಕ್ಷೆಗೆ ಒಳಗಾಗುವಂತೆ ಸರ್ಕಾರ ಒತ್ತಾಯಿಸಲು ಸಾಧ್ಯವಿಲ್ಲ. ತಮ್ಮ ಅಪಾಯದ ಮಟ್ಟವನ್ನು ಅಂದಾಜಿಸಿಕೊಂಡ ನಂತರ, ತಮಗೆ ಸೋಂಕಿನ ಅಪಾಯವಿದೆ ಎಂದು ಅನಿಸಿದರೆ, ಎಚ್‌ಐವಿ ಪತ್ತೆ ಮತ್ತು ಮುಂದಿನ ಚಿಕಿತ್ಸೆಗಾಗಿ ಅವರು ನಮ್ಮ ಕೇಂದ್ರಗಳಿಗೆ ಬರಬೇಕು.

ನಾವು ಎಲ್ಲಿಯೂ ಕಡ್ಡಾಯ ಪರೀಕ್ಷೆಗೆ ಆಗ್ರಹಿಸುತ್ತಿಲ್ಲ, ಏಕೆಂದರೆ ಕಡ್ಡಾಯ ಪರೀಕ್ಷೆಯು ನಿಯಮಗಳಿಗೆ ವಿರುದ್ಧವಾಗಿದೆ. 'ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಕಾಯ್ದೆ 2017'ರ ಪ್ರಕಾರ, ಯಾವುದೇ ವ್ಯಕ್ತಿಯನ್ನು ಎಚ್‌ಐವಿ ಪರೀಕ್ಷೆಗೆ ಒಳಗಾಗುವಂತೆ ಕಡ್ಡಾಯಗೊಳಿಸಲು ಸಾಧ್ಯವಿಲ್ಲ' ಎಂದು ಅವರು ಹೇಳಿದರು. -ನಿರ್ದೇಶಕಿ ಪದ್ಮಾ ಬಸವಂತಪ್ಪ

# ಹೊಸ ಪ್ರಯೋಗದೊಂದಿಗೆ ಕಾಂಗ್ರೆಸ್ ಜಿಲ್ಲಾಧ್ಯಕ್ಷರ ಆಯ್ಕೆ

• ಉದಯವಾಹಿನಿ, ಮಾಲೂರು


ಉದಯವಾಹಿನಿ ಚಿತ್ರ

ಬೂತ್ ಮಟ್ಟದಲ್ಲಿ ಕಾಂಗ್ರೆಸ್ ಪಕ್ಷವನ್ನು ಬಲಿಷ್ಠಗೊಳಿಸಲು ರಾಹುಲ್‌ಗಾಂಧಿ ಸೂಚನೆ ಮೇರೆಗೆ ಜಿಲ್ಲಾಧ್ಯಕ್ಷರನ್ನು ಹೊಸ ಪ್ರಯೋಗದೊಂದಿಗೆ ಆಯ್ಕೆ ಮಾಡಲಾಗುತ್ತಿದ್ದು, ಜಿಲ್ಲಾಧ್ಯಕ್ಷರನ್ನು ಆಯ್ಕೆ ಮಾಡಲು ಪ್ರತಿ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರ ಅಭಿಪ್ರಾಯವನ್ನು ಸಂಗ್ರಹಿಸಿ ಐಸಿಸಿ ವರಿಷ್ಠರಿಗೆ ಮಾಹಿತಿ ಒದಗಿಸಲಾಗುವುದು ಎಂದು ಎಐಸಿಸಿ ವೀಕ್ಷಕ ರಾಮಕಿಶನ್ ಒಜಾ ತಿಳಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ಜಿಲ್ಲಾ ಕಾಂಗ್ರೆಸ್ ಪಕ್ಷದ ಅಧ್ಯಕ್ಷರ ಆಯ್ಕೆಗೆ ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರಿಂದ ಅಭಿಪ್ರಾಯ ಸಂಗ್ರಹಣೆ ಮಾಡಲು ಮಾಲೂರು, ಮಾಸ್ತಿ ಬ್ಲಾಕ್ ಕಾಂಗ್ರೆಸ್ ಸಮಿತಿಗಳ ವತಿಯಿಂದ ಆಯೋಜಿಸಲಾಗಿದ್ದ ಸಭೆಗೆ ಆಗಮಿಸಿದ್ದ ಒಜಾ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದರು.

ಈ ಹಿಂದೆ ಕಾಂಗ್ರೆಸ್ ಪಕ್ಷದ ಜಿಲ್ಲಾಧ್ಯಕ್ಷರನ್ನು ಆಯ್ಕೆ ಮಾಡುವ ವೇಳೆ ನಾಲ್ಕೈದು ಮುಖಂಡರು ಚರ್ಚಿಸಿ ತೀರ್ಮಾನ ಮಾಡುತ್ತಿದ್ದರು, ಆದರೆ ರಾಹುಲ್ ಗಾಂಧಿ ವಿನೂತನ ಪ್ರಯೋಗ ಮಾಡುತ್ತಿದ್ದು,ಕಾರ್ಯಕರ್ತರ ಅಭಿಪ್ರಾಯದ ಮೇರೆಗೆ ಆಯ್ಕೆ ಮಾಡಲು ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ವೀಕ್ಷಕರನ್ನು ಕಳುಹಿಸಿದ್ದಾರೆ.

ಕಾಂಗ್ರೆಸ್ ಜಿಲ್ಲಾಧ್ಯಕ್ಷರಾಗುವವರು ಚತುರರಾಗಿರಬೇಕು,ಸಂಘಟನಾ ಶಕ್ತಿ ಎಲ್ಲರನ್ನೂ ಒಗ್ಗೂಡಿಸಿಕೊಂಡು ಹೋಗಬೇಕು,ಪಕ್ಷವನ್ನು ಗಟ್ಟಿಗೊಳಿಸಲು ಮುಂದಾಗುವಂತಹವರನ್ನು ಆಯ್ಕೆ ಮಾಡಲು ಕಾರ್ಯಕರ್ತರೇ ತಮ್ಮ ಅಭಿಪ್ರಾಯಗಳನ್ನು ತಿಳಿಸುವ ಹೊಸ ಪ್ರಯೋಗವನ್ನು ಆರಂಭಿಸಿದ್ದಾರೆ. ಕಾರ್ಯಕರ್ತರಿಂದ ಸಂಗ್ರಹಿಸಿದ ಅಭಿಪ್ರಾಯಗಳ ಮಾಹಿತಿಯನ್ನು ಎಐಸಿಸಿ ವರಿಷ್ಠರಿಗೆ ಪಕ್ಷದ ವರಿಷ್ಠರು ಜಿಲ್ಲಾ ಕಾಂಗ್ರೆಸ್ ಪಕ್ಷದ ಅಧ್ಯಕ್ಷರ ಆಯ್ಕೆಯನ್ನು ಪ್ರಕಟಿಸುತ್ತಾರೆ.

## ಗುರು ಪೂರ್ಣಿಮೆಗೆ ಅತ್ಯಂತ ಪವಿತ್ರ ಸ್ಥಾನವಿದೆ: ಕಿರಣ್‌ಗೌಡ

• ಉದಯವಾಹಿನಿ, ಕನಕಪುರ

ನಮ್ಮ ಜೀವನಕ್ಕೆ ಜ್ಞಾನ, ಸಂಸ್ಕಾರ ಹಾಗು ಸನ್ಮಾರ್ಗವನ್ನು ತೋರಿದ ಗುರುಗಳನ್ನು ಸ್ಮರಿಸಿ ಗೌರವಿಸುವ ದಿನ ಗುರುಪೂರ್ಣಿಮೆಯಾಗಿದೆ ಎಂದು ಶ್ರೀ ಸಾಯಿರಾಂ ಸೇವಾ ಟ್ರಸ್ಟ್‌ನ ಅಧ್ಯಕ್ಷ ಕಿರಣ್‌ಗೌಡ ಮತ್ತು ಮಣಿಕಂಠ ಹೇಳಿದ್ದಾರೆ. ತಾಲ್ಲೂಕಿನ ಸೀಗೇಕೋಟೆ ಸಮೀಪ ಇರುವ ಶ್ರೀ ಸಾಯಿರಾಂ ಸೇವಾ ಟ್ರಸ್ಟ್‌ನಿಂದ ಗುರುಪೂರ್ಣಿಯ ಅಂಗವಾಗಿ ಆಯೋಜಿಸಲಾಗಿದ್ದ ವಿಶೇಷ ಪೂಜಾ ಕಾರ್ಯಕ್ರಮದ ನೇತೃತ್ವವಹಿಸಿ ಮಾತನಾಡಿದರು.ಭಾರತೀಯ ಸಂಸ್ಕೃತಿಯಲ್ಲಿ ಗುರುಪೂರ್ಣಿಮೆ ಅತ್ಯಂತ ಪವಿತ್ರ ಸ್ಥಾನವಿದ್ದು,ಅರ್ಥಪೂರ್ಣವಾಗಿ ಆಚರಣೆ ಮಾಡಿಕೊಂಡು ಬರಲಾಗುತ್ತಿದೆ. ಹಿಂದೂ ಸಂಸ್ಕೃತಿಯಲ್ಲಿ ಪವಿತ್ರ ಹಬ್ಬಗಳಲ್ಲಿ ಒಂದಾಗಿ ಆಷಾಡ ಮಾಸದ ಹುಣ್ಣಿಮೆಯಂದು ಈ ಹಬ್ಬವನ್ನು ಆಚರಿಸಲಾಗುತ್ತದೆ.ನಮ್ಮ ದೇವಾಲಯದಲ್ಲಿ ಇಂದು ಬೆಳಿಗ್ಗೆ ಶ್ರೀಗಣಪತಿ, ಸಾಯಿ ಬಾಬ, ಹಾಗೂ ದತ್ತಾತ್ರೇಯ ದೇವರುಗಳಿಗೆ ಪ್ರಾತಃಕಾಲದಲ್ಲಿ ವಿಶೇಷ ಅಭಿಷೇಕವಾದ ನಂತರ ಹೂವಿನ ಅಲಂಕಾರವನ್ನು ಮಾಡಲಾಗಿದೆ ಎಂದರು. ಬೆಳಿಗ್ಗೆ 6 ಗಂಟೆಯಿಂದಲೇ ಭಕ್ತಾದಿಗಳ ದರ್ಶನಕ್ಕೆ ಅವಕಾಶ ಕಲ್ಪಿಸಿಕೊಡಲಾಗಿದ್ದು, ಶ್ರೀ ಸಾಯಿಬಾಬ,ಗಣಪತಿ, ದತ್ತಾತ್ರೇಯ ಸ್ವಾಮಿಯ ದರ್ಶನಕ್ಕೆ ಅವಕಾಶವನ್ನು ಕಲ್ಪಿಸಿಕೊಡಲಾಗಿದೆ.


ಉದಯ ವಾಹಿನಿ

ಪ್ರಾದೇಶಿಕ

ಶನಿವಾರ
01 ಆಗಸ್ಟ್ 2026

03


## ಮಿನಿ ನ್ಯೂಸ್

### ಮಹಾ ಗಣಪತಿ ದೇವಾಲಯದಲ್ಲಿ ದೇವರಿಗೆ ವಿಶೇಷ ಪೂಜೆ

• ಉದಯವಾಹಿನಿ, ಚಿಕ್ಕಬಳ್ಳಾಪುರ

ನಗರದ ಹೊರವಲಯ ಶ್ರೀ ಸಿವಿ ವೆಂಕಟರಾಯಪ್ಪ ಶಿಕ್ಷಣ ಕೇಂದ್ರದ ಒಳಾಂಗಣ ಕ್ರೀಡಾಂಗಣದಲ್ಲಿ ಅದ್ದೂರಿಯಾಗಿ 30ನೇ ವರ್ಷದ ದತ್ತಿ ದಿನಾಚರಣೆ ಮತ್ತು 111ನೇ ಸಿ.ವಿ.ವಿ.ಜಯಂತಿ ಕಾರ್ಯಕ್ರಮ ನಡೆಯಿತು. ಕೆ.ವಿ.ಮತ್ತು ಪಂಚಗಿರಿ ಶಿಕ್ಷಣ ದತ್ತಿಗಳ ಅಧ್ಯಕ್ಷ ಕೆ.ವಿ.ನವೀನ್ ಕಿರಣ್ ಮಾರ್ಗದರ್ಶನದಲ್ಲಿ ನಡೆದ ದತ್ತಿ ದಿನಾಚರಣೆ ಕಾರ್ಯಕ್ರಮದಲ್ಲಿ ಮೊದಲಿಗೆ ಕ್ಯಾಂಪಸ್ ನಲ್ಲಿರುವ ಶ್ರೀ ಸರ್ವ ವಿಘ್ನ ನಿವಾರಕ ಮಹಾ ಗಣಪತಿ ದೇವಾಲಯದಲ್ಲಿ ದೇವರಿಗೆ ವಿಶೇಷ ಪೂಜೆ ನೆರವೇರಿಸಲಾಯಿತು. ದೇವರಿಗೆ ವಿಶೇಷವಾಗಿ ಮಾಡಿದ್ದ ರಜತ ಅಲಂಕಾರ ಭಕ್ತಾದಿಗಳನ್ನು ಸೆಳೆಯಿತು. ಸಿವಿ ವೆಂಕಟರಾಯಪ್ಪ ಮತ್ತು ಅವರ ಧರ್ಮಪತ್ನಿ ಸಿ.ವಿ.ಕಮಲಮ್ಮ ಪುತ್ಥಳಿಗೆ ಹಾಗೂ ಸ್ಮಾರಕಕ್ಕೆ ಬಾರಿ ಹೂಹಾರ ಅಲಂಕಾರ ಮಾಡಲಾಗಿತ್ತು.

ನಿವೃತ್ತರಾದ ಸಿಬ್ಬಂದಿ ವರ್ಗಕ್ಕೆ ಸನ್ಮಾನ ಕ್ರೀಡೆ ಮತ್ತು ಸಾಂಸ್ಕೃತಿಕ ಸ್ಪರ್ಧೆ ಕಾರ್ಯಕ್ರಮಗಳಲ್ಲಿ ಪತ್ರಕರ್ತರಿಗಾಗಿ ಏರ್ಪಡಿಸಿದ ಕ್ರೀಡಾಕೂಟದಲ್ಲಿ ಭಾಗವಹಿಸಿ ವಿಜೇತ ಪತ್ರಕರ್ತರಿಗೆ ಹಾಗೂ ಎಲ್ಲಾ ಪತ್ರಕರ್ತರುಗಳಿಗೆ ಬಹುಮಾನ ಮತ್ತು ನೆನಪಿನ ಕಾಣಿಕೆ ವಿತರಣೆ ಮಾಡಲಾಯಿತು.

# ಅಂಬೇಡ್ಕರ್ ಪುತ್ಥಳಿ ವಿವಾದ ಜಿಲ್ಲಾಡಳಿತದಿಂದ ಕಾನೂನು ಪಾಲನೆಗೆ ಸೂಚನೆ!

## ಪಿಡಿಒ ಜಾಗ ನೀಡಿದ್ದರೂ ಜಿಲ್ಲಾಡಳಿತದ ಅನುಮತಿ ಪಡೆಯದೇ ಕೆಲಸ ಆರಂಭಿಸಿರುವುದು ವಿವಾದಕ್ಕ ಕಾರಣವಾಗಿದೆ

• ಉದಯವಾಹಿನಿ, ಕೋಲಾರ

ತಾಲ್ಲೂಕಿನ ವೇಮಗಲ್ ಹೋಬಳಿಯ ಹುಲ್ಲಂಕಲ್ಲು ಗ್ರಾಮದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಪುತ್ಥಳಿ ಸ್ಥಾಪನೆಗೆ ಸಂಬಂಧಿಸಿದ ವಿವಾದದ ಹಿನ್ನೆಲೆಯಲ್ಲಿ ಅಪರ ಜಿಲ್ಲಾಧಿಕಾರಿ ಮಂಗಳಾ ಅವರ ಅಧ್ಯಕ್ಷತೆಯಲ್ಲಿ ಗ್ರಾಮದ ಎರಡೂ ಕಡೆಯ ಮುಖಂಡರು, ಜಾಗೃತ ಸಮಿತಿ ಸದಸ್ಯರು ಹಾಗೂ ದಲಿತ ಸಂಘಟನೆಗಳ ಮುಖಂಡರ ಸಭೆಯನ್ನು ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆಯಿತು.

**1 ಪುತ್ಥಳಿ ಸ್ಥಾಪನೆಗ ಸೂಕ್ತ ಸ್ಥಳ**

**2 ಅನುಮತಿ ಪಡೆದು ನಡೆಸಬೇಕು**

**3 ಯಾರನ್ನು ಹೊಣೆ ಮಾಡಬೇಕಿತ್ತು**

ಸಭೆಯಲ್ಲಿ ಮಾತನಾಡಿದ ಅಪರ ಜಿಲ್ಲಾಧಿಕಾರಿ ಮಂಗಳಾ ಪ್ರತಿಮೆ ಸ್ಥಾಪನೆಗೆ ಸಂಬಂಧಿಸಿದ ಜಾಗದ ಸಮಸ್ಯೆಯ ಕುರಿತು ನೂತನ ಜಿಲ್ಲಾಧಿಕಾರಿಯೊಂದಿಗೆ ಚರ್ಚಿಸಿ ಜಿಲ್ಲಾಡಳಿತದಿಂದಲೇ ತಹಸೀಲ್ದಾರ್ ಸೇರಿದಂತೆ ಸಂಬಂಧಿಸಿದ ಅಧಿಕಾರಿಗಳೊಂದಿಗೆ ಸ್ಥಳ ಪರಿಶೀಲನೆ ನಡೆಸಿ ಕಾನೂನುಬದ್ಧವಾಗಿ ಸೂಕ್ತ ನಿರ್ಧಾರ ಕೈಗೊಳ್ಳಲಾಗುವುದು. ಅಲ್ಲಿಯವರೆಗೆ ಎಲ್ಲರೂ ಕಾನೂನು ಸುವ್ಯವಸ್ಥೆ ಕಾಪಾಡಬೇಕು. ಯಾರೂ ಕಾನೂನನ್ನು ಕೈಗೆತ್ತಿಕೊಳ್ಳಬಾರದು. ಕಾನೂನು ಉಲ್ಲಂಘಿಸಿದರೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು. ಪುತ್ಥಳಿ ಸ್ಥಾಪನೆಗ ಸೂಕ್ತ ಸ್ಥಳವನ್ನು ಜಿಲ್ಲಾಡಳಿತವೇ ಗುರುತಿಸಲಿದೆ. ಯಾವುದೇ ಕಾಮಗಾರಿಯಾಗಲಿ ಕಾನೂನುಬದ್ಧ ಅನುಮತಿ ಪಡೆದು ಮಾತ್ರ ನಡೆಸಬೇಕು. ಪಿಡಿಒ ಜಾಗ ನೀಡಿದ್ದರೂ ಜಿಲ್ಲಾಡಳಿತದ ಅನುಮತಿ ಪಡೆಯದೇ ಕೆಲಸ ಆರಂಭಿಸಿರುವುದು ವಿವಾದಕ್ಕ ಕಾರಣವಾಗಿದೆ. ಈ ಕುರಿತು ಪಿಡಿಒ ಅವರನ್ನು ಈಗಾಗಲೇ ಅಮಾನತುಗೊಳಿಸುವಂತೆ ಕ್ರಮ ಕೈಗೊಳ್ಳಲಾಗಿದ್ದು, ಸ್ಥಳ ಪರಿಶೀಲನೆ ನಡೆಸಿ ಸರ್ಕಾರದ ಗಮನಕ್ಕೆ ತರಲಾಗುವುದು. ಅಗತ್ಯ ಅನುದಾನವನ್ನೂ ಸರ್ಕಾರದಿಂದಲೇ ಒದಗಿಸಲಾಗುವುದು ಭರವಸೆ ನೀಡಿದರು. ಗ್ರಾಮದಲ್ಲಿ ಸಹೋದರತ್ವ ಮತ್ತು ಸೌಹಾರ್ದತೆ ಕಾಪಾಡಿಕೊಳ್ಳಬೇಕು. ಡಾ. ಅಂಬೇಡ್ಕರ್ ಎಲ್ಲರಿಗೂ ಆದರ್ಶ ವ್ಯಕ್ತಿಯಾಗಿದ್ದು, ಅವರ ಹೆಸರಿನಲ್ಲಿ ಯಾವುದೇ ರೀತಿಯ ಸಂಘರ್ಷ ಉಂಟಾಗಬಾರದು ಜಿಲ್ಲಾಡಳಿತ ಗಮನಕ್ಕೆ ತರದೆ ಮಾಡಿದ್ದೀರಾ ಏನಾದರೂ ಅಹಿತಕರ ಘಟನೆಗಳು ನಡೆದಿದ್ದರೆ ಯಾರನ್ನು ಹೊಣೆ ಮಾಡಬೇಕಿತ್ತು ತಾಳ್ಮೆಯಿಂದ ಇದ್ದರೆ ಸಮಸ್ಯೆ ಪರಿಹರಿಸಲು ಸಾಧ್ಯವಾಗುತ್ತದೆ ಎಂದು ಮುಖಂಡರಲ್ಲಿ ಮನವಿ ಮಾಡಿದರು. ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ರವಿಶಂಕರ್ ಮಾತನಾಡಿ, ಯಾವುದೇ ಮಹನೀಯರ ಭಾವಚಿತ್ರ ಅಥವಾ ಪುತ್ಥಳಿಯಾಗಲಿ ಊರ ಮುಂದೆ ಇರುವುದಕ್ಕಿಂತ ನಮ್ಮ ಹೃದಯದಲ್ಲಿ ಇರಬೇಕು ಇದರಲ್ಲಿ ಪ್ರತಿಷ್ಠೆ ತೋರಬಾರದು ಕೆಲವರು ಸಮಸ್ಯೆ ಬಗೆಹರಿಯುವುದಕ್ಕಿಂತ ವಿವಾದ ಮುಂದುವರಿಯಲಿ ಎಂಬ ಮನೋಭಾವದಿಂದ ನಡೆದುಕೊಳ್ಳುತ್ತಿದ್ದಾರೆ. ಸರ್ಕಾರಿ ಜಾಗವನ್ನು ಯಾವುದೇ ಸಮುದಾಯ ಅಥವಾ ಧರ್ಮದವರು ಅನುಮತಿ ಇಲ್ಲದೆ ಒತ್ತುವರಿ ಮಾಡಿಕೊಂಡು ನಿರ್ಮಾಣ ಕಾರ್ಯ ಕೈಗೊಂಡರೆ ಕಾನೂನು ಕ್ರಮ ಅನಿವಾರ್ಯ. ಜಿಲ್ಲಾಡಳಿತ ಸ್ಥಳ ಗುರುತಿಸುವವರೆಗೆ ಯಾರೂ ಕಾನೂನು ಮೀರಿ ನಡೆದು ಕೊಳ್ಳಬಾರದು ಎಂದು ಹೇಳಿದರು. ಸಭೆಯ ಬಳಿಕ ಗ್ರಾಮಸ್ಥೆ ಕೋಮಲ ಮಾತನಾಡಿ ನಮ್ಮ ಗ್ರಾಮದಲ್ಲಿ ಎಲ್ಲರೂ ಅಣ್ಣ-ತಮ್ಮಂದಿರಂತೆ ಬದುಕುತ್ತಿದ್ದೇವೆ. ಗ್ರಾಮದ ಸುನಿಲ್ ಕುಮಾರ್ ಎಂಬುವವರು ಹೊರಗಿನವರನ್ನು ತಂದು ಅಶಾಂತಿ ಸೃಷ್ಟಿಸಿದ್ದಾರೆ ನಮ್ಮ ಕಡೆಯವರ ಬಳಿ ಮಾಡಿರುವ ಸಾಲವನ್ನು ವಾಪಸ್ಸು ಕೊಡುವಂತೆ ಪ್ರಶ್ನೆ ಮಾಡಿದ್ದಕ್ಕಾಗಿ ಈ ಗಲಾಟೆ ಸೃಷ್ಟಿಯಾಗಿದೆ.


ಉದಯವಾಹಿನಿ ಚಿತ್ರ

ಗ್ರಾಮದ ಸುನಿಲ್ ಎಂಬ ವ್ಯಕ್ತಿಯ ವೈಯಕ್ತಿಕ ಸಮಸ್ಯೆಯನ್ನು ಅಂಬೇಡ್ಕರ್ ಅವರ ಹೆಸರಿನಲ್ಲಿ ವಿವಾದವನ್ನಾಗಿ ಮಾಡಲಾಗಿದೆ. ಜಿಲ್ಲಾಡಳಿತ ತೆಗದುಕೊಳ್ಳುವ ಯಾವುದೇ ಕಾನೂನುಬದ್ಧ ತೀರ್ಮಾನಕ್ಕೆ ಗ್ರಾಮದ ಎಲ್ಲಾ ಸಮುದಾಯವರು ಬದ್ಧರಾಗಿರುವುದಾಗಿ ತಿಳಿಸಿದರು. -ಅಧ್ಯಕ್ಷ ಮುನಿಅಂಜಿನಪ್ಪ

**ಅಂಬೇಡ್ಕರ್ ಅವರ ಬಗ್ಗೆ ಗೌರವವಿದೆ**

ಸಭೆಯಲ್ಲಿ ಮಾತನಾಡಿದ ಗ್ರಾಮಸ್ಥರು ವಿವಿಧ ಸಂಘಟನೆಗಳ ಮುಖಂಡರು, ಜಾಗ ನೀಡಿದ ಪಿಡಿಒ ಸಭೆಗೆ ಹಾಜರಾಗಬೇಕಿತ್ತು. ಎಲ್ಲರಿಗೂ ಅಂಬೇಡ್ಕರ್ ಅವರ ಬಗ್ಗೆ ಗೌರವವಿದೆ. ಸೂಕ್ತ ಸ್ಥಳದಲ್ಲಿ ಪುತ್ಥಳಿ ನಿರ್ಮಾಣವಾಗಲಿ. ಪುತ್ಥಳಿಗಿಂತ ಅವರ ಆದರ್ಶಗಳನ್ನು ಪಾಲಿಸುವುದೇ ಮುಖ್ಯವಾಗಬೇಕು ಈ ವಿವಾದ ಉಂಟಾಗಲು ಕೆಲವು ಅಧಿಕಾರಿಗಳು ಕಾರಣ ಅವರ ವಿರುದ್ದವು ಕ್ರಮವಾಗಬೇಕಿದೆ ಎಂದು ಒತ್ತಾಯಿಸಿದರು. ಅಭಿಪ್ರಾಯಪಟ್ಟರು.

## ಮಕ್ಕಳ ಹಕ್ಕುಗಳ ಅರಿವು ಪ್ರತಿಯೊಬ್ಬರ ಹೊಣೆ: ವಕೀಲ ಅರವಿಂದ್ ಕುಮಾರ್



ಉದಯವಾಹಿನಿ ಚಿತ್ರ

• ಉದಯವಾಹಿನಿ, ಗುಂಡ್ಲುಪೇಟೆ

ಮಕ್ಕಳ ಹಕ್ಕುಗಳ ರಕ್ಷಣೆ ಹಾಗೂ ಬಾಲ ನ್ಯಾಯ ಕಾಯ್ದೆಗಳ ಬಗ್ಗೆ ಪ್ರತಿಯೊಬ್ಬರೂ ಅರಿವು ಹೊಂದಿರಬೇಕು ಎಂದು ವಕೀಲ ಎನ್. ಅರವಿಂದ್ ಕುಮಾರ್ ಹೇಳಿದರು. ತಾಲ್ಲೂಕಿನ ಹುಂಡೀಪುರ ಸರ್ಕಾರಿ ಶಾಲೆಯಲ್ಲಿ ಆಯೋಜಿಸಿದ್ದ ಬಾಲ ನ್ಯಾಯ ಮತ್ತು ಮಕ್ಕಳ ಹಕ್ಕುಗಳ ಕುರಿತು ಕಾನೂನು ಅರಿವು ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ ಅವರು, ಮಕ್ಕಳ ಶಿಕ್ಷಣ, ಸುರಕ್ಷತೆ ಮತ್ತು ಹಕ್ಕುಗಳ ಸಂರಕ್ಷಣೆಗೆ ಸಂಬಂಧಿಸಿದ ವಿವಿಧ ಕಾನೂನುಗಳ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು. ಮಕ್ಕಳ ಮೇಲೆ ನಡೆಯುವ ದೌರ್ಜನ್ಯ, ಬಾಲಕಾರ್ಮಿಕ ಪದ್ಧತಿ ಹಾಗೂ ಬಾಲ್ಯವಿವಾಹದಂತಹ ಪ್ರಕರಣಗಳ ವಿರುದ್ಧ ಕಾನೂನು ಕ್ರಮಗಳ ಬಗ್ಗೆ ಅರಿವು ಮೂಡಿಸಿದರು. ಮುಖ್ಯ ಶಿಕ್ಷಕ ವೆಂಕಟೇಶ್ ಮಾತನಾಡಿ, ವಿದ್ಯಾರ್ಥಿಗಳು ತಮ್ಮ ಹಕ್ಕುಗಳ ಜೊತೆಗೆ ಕರ್ತವ್ಯಗಳ ಬಗ್ಗೆಯೂ ಅರಿವು ಹೊಂದಿ ಉತ್ತಮ ಪ್ರಜೆಗಳಾಗಿ ಬೆಳೆಯಬೇಕು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ವಕೀಲರಾದ ಸಿದ್ದಯ್ಯ, ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಆ.2ರಂದು ಸಿವಿಲ್ ಪೊಲೀಸ್ ಪರೀಕ್ಷೆಗೆ ಮೈಸೂರಿನಲ್ಲಿ 8ನೇ ಉಚಿತ ಅಣಕು ಪರೀಕ್ಷೆ

• ಉದಯವಾಹಿನಿ, ಮೈಸೂರು


ಉದಯವಾಹಿನಿ ಚಿತ್ರ

ರಾಜ್ಯಾದ್ಯಂತ ಇದೇ ಭಾನುವಾರ ಆಗಸ್ಟ್ 2 ರಂದು ನಡೆಯಲಿರುವ ಸಿವಿಲ್ ಪೊಲೀಸ್ ಕಾನ್ಸ್‌ಟೇಬಲ್ ನೇಮಕಾತಿ ಲಿಖಿತ ಪರೀಕ್ಷೆಗೆ ಹಾಜರಾಗುವ ಉದ್ಯೋಗಾಕಾಂಕ್ಷಿಗಳ ಅನುಕೂಲಕ್ಕಾಗಿ ಮೈಸೂರು ನಗರ ಕೇಂದ್ರ ಗ್ರಂಥಾಲಯವು 8ನೇ ಸಮಗ್ರ ಅಣಕು ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸಿತು.

ಬೆಂಗಳೂರಿನ ಜ್ಞಾನಗಂಗೋತ್ರಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ಸಹಯೋಗದೊಂದಿಗೆ ನಗರ ಕೇಂದ್ರ ಗ್ರಂಥಾಲಯದ ಸಭಾಂಗಣದಲ್ಲಿ ನಡೆದ ಈ ಅಣಕು ಪರೀಕ್ಷೆಗೆ ಸುಮಾರು 150 ಉದ್ಯೋಗಾಕಾಂಕ್ಷಿಗಳು ಹಾಜರಾಗಿದ್ದರು. ಈವರೆಗೆ ಪೀಪಲ್ಸ್ ಪಾರ್ಕ್ ಗ್ರಂಥಾಲಯ ಸೇರಿ ಒಟ್ಟು 7 ಅಣಕು ಪರೀಕ್ಷೆಗಳನ್ನು ಉಚಿತವಾಗಿ ನಡೆಸಲಾಗಿತ್ತು.

ಪರೀಕ್ಷೆ ಮುಕ್ತಾಯದ ನಂತರ ಮಾತನಾಡಿದ ಮೈಸೂರು ಪ್ರಾದೇಶಿಕ ಆಯುಕ್ತರು ಹಾಗೂ ನಗರ ಗ್ರಂಥಾಲಯ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀ ನಿತೀಶ್ ಪಾಟೀಲ್ ಭಾ.ಆ.ಸೇ. ಅವರು, ಉದ್ಯೋಗಾಕಾಂಕ್ಷಿಗಳ ಶಿಸ್ತನ್ನು ಪ್ರಶಂಸಿಸಿದರು. ''ಶ್ರಮ, ಶಿಸ್ತು ಮತ್ತು ಪ್ರಾಮಾಣಿಕತೆ ಜೀವನವನ್ನು ರೂಪಿಸುತ್ತದೆ. ರಾಜ್ಯ ಮತ್ತು ಕೇಂದ್ರ ಮಟ್ಟದ ಎಲ್ಲಾ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸುವ ಅಭ್ಯಾಸ ಮಾಡಿ. ಇತ್ತೀಚೆಗೆ ರೈಲ್ವೆ ಮತ್ತು ಕೇಂದ್ರ ಸರ್ಕಾರಿ ಹುದ್ದೆಗಳಲ್ಲಿ ಕನ್ನಡಿಗರ ಸಂಖ್ಯೆ ಕಡಿಮೆಯಾಗುತ್ತಿರುವುದು ವಿಷಾದನೀಯ'' ಎಂದು ಹೇಳಿದರು.

ಮುಂದೆ ಇತರೆ ಪರೀಕ್ಷೆಗಳಿಗೂ ತರಬೇತಿ ಈ ಸಂದರ್ಭದಲ್ಲಿ ಮಾತನಾಡಿದ ಉಪನಿರ್ದೇಶಕ ಶ್ರೀ ಮಂಜುನಾಥ್ ಬಿ ಅವರು, ಮುಂದಿನ ದಿನಗಳಲ್ಲಿ ಗ್ರಾಮ ಸಹಾಯಕ ಅಧಿಕಾರಿ, ಗ್ರಾಮ ಲೆಕ್ಕಾಧಿಕಾರಿ, ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಪರೀಕ್ಷೆಗಳಿಗೂ ಉಚಿತ ತರಬೇತಿ ನೀಡಲಾಗುವುದು ಎಂದು ತಿಳಿಸಿದರು. ಈ ಮಾದರಿಯಲ್ಲಿ ಪರೀಕ್ಷೆ ನಡೆಸುವಂತೆ ಹಿಂದುಳಿದ ವರ್ಗಗಳ ಮತ್ತು ಸಮಾಜ ಕಲ್ಯಾಣ ಇಲಾಖೆ ಕೋರಿರುವುದಾಗಿಯೂ ಹೇಳಿದರು.

> ಅಣಕು ಪರೀಕ್ಷೆಗಳು ಅಭ್ಯರ್ಥಿಗಳ ಮನೋಸ್ಥೈರ್ಯ ಹೆಚ್ಚಿಸುತ್ತದೆ. ಇಡೀ ರಾಜ್ಯದಲ್ಲೇ ಇಂತಹ ಉಚಿತ ಅಣಕು ಪರೀಕ್ಷೆ ನಡೆಸುತ್ತಿರುವುದು ಮೈಸೂರು ನಗರ ಕೇಂದ್ರ ಗ್ರಂಥಾಲಯದಲ್ಲಿ ಮಾತ್ರ ಎಂದು ಅವರು ಶ್ಲಾಘಿಸಿದರು.

## ಕುಟುಂಬದ ಹಿರಿಯರೇ ನಿಜವಾದ ಆಸ್ತಿ: ಚೂಡಾರತ್ನಮ್ಮ ಅಭಿಮತ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮೈಸೂರು

ಮೈಸೂರಿನ ಶ್ರೀರಾಂಪುರದ ಜೈನ್ ಎಜುಕೇಶನ್ ಸೊಸೈಟಿಯ ಮಹಾವೀರ್ ವಿದ್ಯಾಮಂದಿರ ಶಾಲೆಯಲ್ಲಿ ಅಜ್ಜ ಅಜ್ಜಿಯಂದಿರ ದಿನಾಚರಣೆ ಪ್ರಯುಕ್ತ ಹಿರಿಯ ನಾಗರೀಕರಾದ ಶ್ರೀಮತಿ ಚೂಡಾರತ್ನಮ್ಮನವರನ್ನು ಅಭಿನಂದಿಸಲಾಯಿತು ನಂತರ ನೆರೆದಿದ್ದ ಪೋಷಕರು ಹಾಗೂ ಮಕ್ಕಳಿಗೆ ಹಿರಿಯರ ಸೇವೆ, ಕೌಟುಂಬಿಕ ಮೌಲ್ಯಗಳ ಬಗ್ಗೆ ತಿಳಿಸಿದರು ಪುತ್ರ ಡಿ ಕೃಷ್ಣಕುಮಾರ್,ಶಾಲೆಯ ಅಧ್ಯಕ್ಷರಾದ ಡಾ .ಬಾಹುಬಲಿ ಜಿ ನಾಗಾವಿ ಮುಖ್ಯೋಪಾಧ್ಯಾಯರಾದ ಶ್ರೀಕಂಠ ದತ್ತ ಹಾಗೂ ಸಿಬ್ಬಂದಿವರ್ಗ ಜೊತೆಗಿದ್ದರು.

## ಮುಂದುವರೆದ ಕಾವೇರಿ ಹೋರಾಟ ಆಕ್ರೋಶ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಮೈಸೂರು

ತಮಿಳುನಾಡಿಗೆ 15 ದಿನಗಳ ಕಾಲ ನೀರು ಹರಿಸಿ ಎಂಬ ಕಾವೇರಿ ನೀರು ನಿರ್ವಹಣಾ ಮಂಡಳಿಯ ಆದೇಶದ ವಿರುದ್ಧ ಮೈಸೂರಿನಲ್ಲಿ ಸರಣಿ ಪ್ರತಿಭಟನೆಗಳು ಎರಡನೇ ದಿನವೂ ಮುಂದುವರೆದವು.

ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಬಳಗ ನಗರದ ರಾಮಸ್ವಾಮಿ ವೃತ್ತದಲ್ಲಿ ಜಮಾವಣೆಗೊಂಡು ನೀರು ಬಿಡುವಂತೆ ಆದೇಶ ಮಾಡಿದ ಮಂಡಳಿ ವಿರುದ್ಧ ನಾನಾ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನೆ ನೇತೃತ್ವವಹಿಸಿದ್ದ ಬಳಗದ ಸಂಸ್ಥಾಪಕ ಅಧ್ಯಕ್ಷ ಡಾ.ಎಂ.ಲಿಂಗರಾಜು ಮಾತನಾಡಿ, ಕಾವೇರಿ ಪ್ರಾಧಿಕಾರ ಸೂಚನೆಯನ್ನು ಖಂಡಿಸುತ್ತೇನೆ. ಮೈಸೂರು, ಬೆಂಗಳೂರು, ಮಂಡ್ಯ ಜಿಲ್ಲೆಗೆ ಕುಡಿಯಲು ನೀರಿನ ಅಭಾವವಿದೆ. ರೈತರ ಬೆಳೆಗೂ ನೀರಿಲ್ಲ ಎಂದಿದ್ದಾರೆ. ರಾಜ್ಯ ಈಗಾಗಲೇ ಬರ ಪರಿಸ್ಥಿತಿ ಎದುರಾಗಿದೆ. ಹೀಗಾಗಿ ರಕ್ತ ಕೊಟ್ಟರೂ ಸಹ ನೀರು ಕೊಡುವುದಿಲ್ಲ. ರಾಜ್ಯ ಸರ್ಕಾರ ರಾತ್ರೋರಾತ್ರಿ ನೀರು ಹರಿಯಲು ಬಿಟ್ಟರೆ ರಾಜ್ಯಾದ್ಯಂತ ಉಗ್ರ ಹೋರಾಟ ಮಾಡಬೇಕಾಗುತ್ತದೆ. ಈ ಹಿನ್ನೆಲೆಯಲ್ಲಿ ಒಂದು ಹನಿ ನೀರು ಬಿಡಬಾರದು ಎಂದು ಆಗ್ರಹಿಸುತ್ತೇನೆಂದರು. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಮಿಳುನಾಡು ವಿಜಯ ಸರ್ಕಾರಕ್ಕೆ ಮಣಿಯದೇ ಈ ಕೂಡಲೇ ಮೇಕೆದಾಟು ಯೋಜನೆಗೆ ಚಾಲನೆ ನೀಡಬೇಕು. ಕನ್ನಡ ಪರ ಸಂಘಟನೆಗಳೆಲ್ಲವೂ ಅವರೊಟ್ಟಿಗೆ ನಿಲ್ಲಲ್ಲಿದ್ದು, ರಾಜ್ಯ, ರೈತ, ಜನರ ಕುಡಿಯುವ ನೀರಿನ ವಿಚಾರದಲ್ಲಿ ಮಹತ್ತರವಾದ ತೀರ್ಮಾನಕೈಗೊಳ್ಳಬೇಕೆಂದರು.

## ಶೈಕ್ಷಣಿಕ ಅಭಿವೃದ್ಧಿಗೆ ಎಸ್‌ಎಲ್‌ಎನ್ ಧರ್ಮ ಸಂಸ್ಥೆಯಿಂದ ಯೋಜನೆ

• ಉದಯವಾಹಿನಿ, ಮಾಲೂರು

ದೊಡ್ಡಣ್ಣ ಶೆಟ್ಟರು 120 ವರ್ಷಗಳ ಹಿಂದೆಯೇ ಪ್ರತಿಯೊಬ್ಬರಿಗೂ ಶಿಕ್ಷಣ ಸಿಗಬೇಕೆಂಬ ಉದ್ದೇಶದಿಂದ ಶೈಕ್ಷಣಿಕ ವಿದ್ಯಾ ಸಂಸ್ಥೆಯನ್ನು ಪ್ರಾರಂಭಿಸಿದ್ದರು. ಇದರಿಂದ ಲಕ್ಷಾಂತರ ಜನ ಉತ್ತಮ ಶಿಕ್ಷಣ ಪಡೆದು ಉನ್ನತ ಹುದ್ದೆಗಳಲ್ಲಿ ಸೇವೆ ಮಾಡುತ್ತಿದ್ದಾರೆ ಎಂದು ಬಿಎಂಟಿಸಿ ಅಧ್ಯಕ್ಷ ವಿ.ಎಸ್. ಆರಾಧ್ಯ ಹೇಳಿದರು .

ನಗರದ ಕೋಟೆಯಲ್ಲಿರುವ ದೊಡ್ಡಣ್ಣ ಶೆಟ್ಟರ ಎಸ್‌ಎಲ್‌ಎನ್ ಧರ್ಮ ಸಂಸ್ಥೆ ಆವರಣದಲ್ಲಿ 2026-27ನೇ ಸಾಲಿನ ಎಸ್‌ಎಲ್‌ಎನ್ ಧರ್ಮ ಸಂಸ್ಥೆಯ ಸಮೂಹ ಶಿಕ್ಷಣ ಸಂಸ್ಥೆಗಳ ನೂತನ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಸ್ವಾಗತ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ತಮ್ಮ ತಂದೆ ತಾಯಿ ಹಾಗೂ ಗುರುಗಳಿಗೆ ಗೌರವ ನೀಡುವುದರ ಜತೆಗೆ ಅವರ ಮಾರ್ಗದರ್ಶನದಲ್ಲೇ ಶಿಕ್ಷಣ ಪಡೆದರೆ ಉತ್ತಮ ಜೀವನವನ್ನು ರೂಪಿಸಿಕೊಳ್ಳಲು ಸಾಧ್ಯವಾಗುತ್ತದೆ. ಕಲಾಸಿಪಾಳ್ಯಕ್ಕೆ ಬರುವ ಬಿಎಂಟಿಸಿ ಬಸ್ಸುಗಳಲ್ಲಿ ಶ್ರೀ ದೊಡ್ಡಣ್ಣ ಶೆಟ್ಟರ ಭಾವಚಿತ್ರ ಇರುವ ಡಿಜಿಲೀಕರಣ ನಾಮಫಲಕ ಅಳವಡಿಸಲು ಈಗಾಗಲೇ ಅಗತ್ಯ ಕ್ರಮ ತೆಗೆದುಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಮುಖ್ಯ ಅತಿಥಿಯಾಗಿದ್ದ ರಾಜ್ಯ ಕುಸ್ತಿ ಪೆಡರೇಷನ್ ಅಧ್ಯಕ್ಷ ಹಾಗೂ ಜೈಯಕರ್ನಾಟಕ ಜನಪರ ವೇದಿಕೆ ಸಂಸ್ಥಾಪಕ ಅಧ್ಯಕ್ಷ ಬೆಳ್ಳಿಪ್ವಾಡಿ ಗುಣರಂಜನ್‌ಶೆಟ್ಟಿ ಮಾತನಾಡಿ, ಶ್ರೀದೊಡ್ಡಣ್ಣ ಶೆಟ್ಟರು ಶಿಕ್ಷಣ ಕ್ಷೇತ್ರಕ್ಕೆ ಅಪಾರ ಕೊಡುಗೆಯನ್ನು ನೀಡಿದ್ದಾರೆ. ಮಹಾದಾನಿಗಳಾದ ಅವರ ವಿದ್ಯಾ ಸಂಸ್ಥೆಯಲ್ಲಿ ಅಭ್ಯಾಸ ಮಾಡುತ್ತಿರುವವರು ಅದೃಷ್ಟವಂತರು ಎಂದು ತಿಳಿಸಿದರು. ವಿದ್ಯಾರ್ಥಿಗಳು ಪಠ್ಯ ಹಾಗೂ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸುವ ಮೂಲಕ ತಮ್ಮ ಪ್ರತಿಭೆಯನ್ನು ಪ್ರದರ್ಶನ ಮಾಡಬೇಕು ಎಂದು ತಿಳಿಸಿದರು.

## ಎಸ್ .ಪಿ ಕಚೇರಿ ಸ್ಥಳಾಂತರಗೊಳ್ಳಲು ನಾವು ಬಿಡಲ್ಲ

• ಉದಯವಾಹಿನಿ, ಕೆಜಿಎಫ್


ಉದಯವಾಹಿನಿ ಚಿತ್ರ

ಸರ್ಕಾರದ ಮಟ್ಟದಲ್ಲಿ ಕೆಜಿಎಫ್ ವಿಧಾನಸಭೆ ಕ್ಷೇತ್ರದಲ್ಲಿರುವ ಪೊಲೀಸ್ ವರಿಷ್ಠಾಧಿಕಾರಿ ಕಚೇರಿ ಸ್ಥಳಾಂತರಗೊಳಿಸುವ ಹುನ್ನಾರ ನಡೆಯುತ್ತಿದೆ ಎಂಬ ವಿಷಯ ಬೆಳಕಿಗೆ ಬಂದಿದೆ. ಸದ್ಯ ಶಾಸಕಿ ರೂಪಶಶಿಧರ್ ಕೇವಲ ಬಾಯಿ ಮಾತಿನಲ್ಲಿ ಎಸ್.ಪಿ ಕಚೇರಿ ಸ್ಥಳಾಂತರದ ಬಗ್ಗೆ ಸರ್ಕಾರದ ಮುಂದೆ ಪ್ರಸ್ತಾಪ ಇಲ್ಲ ಎಂದು ಹೇಳುತ್ತಿದ್ದಾರೆ.ಹೀಗಾಗಿ ಅವರು ಈ ಬಗ್ಗೆ ಅಧಿಕೃತ ಆದೇಶ ಹೊರಡಿಸಬೇಕು ಎಂದು ಮಾಜಿ ಶಾಸಕ ಎಸ್.ರಾಜೇಂದ್ರನ್ ಆಗ್ರಹಿಸಿದ್ದಾರೆ.

ಉರಿಗಾಂನಲ್ಲಿ ಮಾತನಾಡಿದ ಅವರು,ರಾಜ್ಯ ಸರ್ಕಾರದಲ್ಲಿ ಪೊಲೀಸ್ ವರಿಷ್ಠಾಧಿಕಾರಿ ಕಚೇರಿಯನ್ನು ಕೆಜಿಎಫ್ ನಗರದಿಂದ ತುಮಕೂರು ಅಥಾವ ಬೀದರ್ ಕಡೆ ಸ್ಥಳಾಂತರಗೊಳಿಸಲು ಪ್ರಯತ್ನ ನಡೆಯುತ್ತಿದೆ. ಆದರೆ ಶಾಸಕಿ ಮಾತ್ರ ಏನು ಆಗಿಲ್ಲ ಎಂದು ಸುಮ್ಮನೆ ಕುಳಿತಿದ್ದಾರೆ. ಮುಂದಿನ ತಿಂಗಳು ಪೊಲೀಸ್ ಪೇದೆಗಳ ನೇಮಕಾತಿ ಪ್ರಕ್ರಿಯೆ ಚಿಕ್ಕಬಳ್ಳಾಪುರ,ತುಮಕೂರು ಹಾಗೂ ಚಾಮರಾಜನಗರ ಜಿಲ್ಲೆಗಳಲ್ಲಿ ಪ್ರಾರಂಭವಾಗಿದೆ.ಆದರಲ್ಲಿ ಕೆಜಿಎಫ್ ಜಿಲ್ಲೆ ಸೇರಿಲ್ಲ ಇದು ಎಲ್ಲರ ಅನುಮಾನಕ್ಕೆ ಎಡೆ ಮಾಡಿಕೊಡುತ್ತದೆ ಎಂದು ಹೇಳಿದರು. ನಾನು ಶಾಸಕನಾಗಿದ್ದ ವೇಳೆಯು ಎಸ್.ಪಿ. ಕಚೇರಿ ಸ್ಥಳಾಂತರ ಮಾಡಲು ಹುನ್ನಾರ ನಡೆಸಲಾಗಿತ್ತು ಆದರೆ ನಾನು ಸರ್ಕಾರದ ಮಂತ್ರಿಗಳೊಂದಿಗೆ ಜಗಳವಾಡಿ ಉಳಿಸಿಕೊಂಡೆ. ಈಗ ಮತ್ತೆ ರಾಜ್ಯ ಸರ್ಕಾರ ಎಸ್.ಪಿ ಕಚೇರಿ ಸ್ಥಳಾಂತರ ಮಾಡಲು ಪ್ರಯತ್ನ ಮಾಡಿದಾಗ ಇದೇ ಶಾಸಕರು ಅಂತಹ ಯಾವುದೇ ಪ್ರಯತ್ನಗಳು ಸರ್ಕಾರದ ಮಟ್ಟದಲ್ಲಿ ನಡೆಯುತ್ತಿಲ್ಲ ಎಂದು ಹೇಳಿದ್ದರು.

ಆದರೆ ಸರ್ಕಾರದಿಂದ ಅಧಿಕೃತ ಆದೇಶ ಹೊರಡಿದ್ದು ಇತಿಹಾಸ ಮರೆತಿಲ್ಲ. ಆದ್ದರಿಂದ ಶಾಸಕರು ಎಸ್.ಪಿ. ಕಚೇರಿ ಸ್ಥಳಾಂತರ ವಿಚಾರವಾಗಿ ಸರ್ಕಾರದ ಮಟ್ಟದಲ್ಲಿ ಸಂಭಂದಪಟ್ಟ ಸಚಿವರೊಂದಿಗೆ ಮಾತನಾಡಿ ಸ್ಪಷ್ಟಿಕರಣ ನೀಡಬೇಕು ಎಂದು ಆಗ್ರಹಿಸಿದರು. ಯಾವುದೇ ಕಾರಣಕ್ಕೂ ಎಸ್.ಪಿ ಕಚೇರಿ ಸ್ಥಳಾಂತರ ಮಾಡಲು ಬಿಡುವುದಿಲ್ಲ.

ಒಂದು ವೇಳೆ ಕೆಜಿಎಫ್ ಬಂದ್ ಮಾಡುವ ಸಂದರ್ಭ ಬಂದರೆ ನಾವು ಅದಕ್ಕೂ ರೆಡಿ ಎಲ್ಲರು ಹೋರಾಟ ಮಾಡಲು ಮುಂದೆ ಬರಬೇಕು.ಕೆಜಿಎಫ್ ಕ್ಷೇತ್ರದಲ್ಲೂ ಜೆನ್ ಜಿಗಳು ಇದ್ದಾರೆ ಎಂಬುದನ್ನು ಮರೆಯಬಾರದು ಎಂದು ಹೇಳಿದರು.

## ಸಮರ್ಪಕವಾದ ದಾಖಲೆ ನೀಡದಿದ್ದರೆ ಮಾನನಷ್ಟ ಮೊಕದ್ದಮೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಕೆಜಿಎಫ್

ಬೇತಮಂಗಲ ಗ್ರಾಮಾಂತರ ಬಿಜೆಪಿ ಅಧ್ಯಕ್ಷ ಲಕ್ಷ್ಮಿನಾರಾಯಣ ನನ್ನ ವಿರುದ್ಧ ಮಾಡಿರುವ ಆರೋಪಕ್ಕೆ ದಾಖಲೆಗಳನ್ನು ನೀಡಬೇಕು.ಸುಳ್ಳು ಆರೋಪಗಳನ್ನು ಮಾಡುತ್ತಾ ಗಾಳಿಯಲ್ಲಿ ಗುಂಡು ಹೊಡೆಯಲು ಪ್ರಯತ್ನಿಸಿದರೆ ನಾನು ಸುಮ್ಮನೆ ಕೂರುವುದಿಲ್ಲ,ಅವರ ವಿರುದ್ಧ ಮಾನಹಾನಿ ನಷ್ಟ ಕೇಸ್ ಹಾಕುತ್ತೇನೆ ಎಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ನಾಗರಾಜ್ ಬೇತಮಂಗಲ ಬಿಜೆಪಿ ಮಂಡಲ್ ಅಧ್ಯಕ್ಷ ಲಕ್ಷ್ಮಿನಾರಾಯಣ ವಿರುದ್ಧ ತೀವ್ರ ವಾಗ್ದಳಿ ನಡೆಸಿದರು.

ನಾಗಶೆಟ್ಟಿಹಳ್ಳಿಯಲ್ಲಿ ಮಾತನಾಡಿದ ಅವರು, ಲಕ್ಷ್ಮೀನಾರಾಯಣ ನಿನ್ನೆ ನಡೆದ ಪತ್ರಿಕಾಗೋಷ್ಠಿಯಲ್ಲಿ ನಾಗಶೆಟ್ಟಿಹಳ್ಳಿಯಲ್ಲಿ ಈಶ್ವರ ದೇವಾಲಯದ ಜಮೀನನ್ನು ನಾಗರಾಜ್ ಹಾಗೂ ಕುಟುಂಬ ಒತ್ತುವರಿ ಮಾಡಿಕೊಂಡು ಕಟ್ಟಡ ನಿರ್ಮಿಸಿದ್ದಾರೆ ಎಂದು ಆರೋಪಿಸಿದ್ದರು. ಸಮಾಜದಲ್ಲಿ ಒಂದು ಸ್ಥಾನದಲ್ಲಿರುವ ವ್ಯಕ್ತಿಗಳ ವಿರುದ್ಧ ಆರೋಪ ಮಾಡುವ ಮುನ್ನ ಸರಿಯಾದ ದಾಖಲೆ ಇಟ್ಟುಕೊಂಡು ಆರೋಪ ಮಾಡಬೇಕು ಹೊರತು ಸುಖಾಸುಮ್ಮನೆ ಅನವಶ್ಯಕ ಹೇಳಿಕೆ ಕೊಡಬಾರದು ಎಂದು ಹೇಳಿದರು.

# ರಾಜ್ಯದ ರೈತರ ಹಿತ ಕಾಪಾಡಿ ನೀರಿನ ಬವಣೆ ನೀಗಿಸಿ: ಬೇರಂಬಾಡಿ ರಂಗಪ್ಪ ನಾಯಕ್ ಆಗ್ರಹ

• ಉದಯವಾಹಿನಿ, ಗುಂಡ್ಲುಪೇಟೆ

ರಾಜ್ಯದ ರೈತರ ಹಿತಾಸಕ್ತಿಯನ್ನು ಕಾಪಾಡುವುದು ಸರ್ಕಾರದ ಮೊದಲ ಆದ್ಯತೆಯಾಗಬೇಕು, ರಾಜ್ಯದ ಅನೇಕ ಭಾಗಗಳಲ್ಲಿ ರೈತರು ಮಳೆ ಕೊರತೆ ಹಾಗೂ ನೀರಿನ ಅಭಾವದಿಂದ ಸಂಕಷ್ಟಕ್ಕೆ ಸಿಲುಕಿರುವ ಸಂದರ್ಭದಲ್ಲಿ ತಮಿಳುನಾಡಿಗೆ ಕಾವೇರಿ ನೀರು ಹರಿಸಲು ಆದೇಶಿಸಿರುವುದು ಸಮಂಜಸವಲ್ಲ ಎಂದು ಕಸ್ತೂರಿ ಕನ್ನಡ ನ್ಯಾಯಪರ ವೇದಿಕೆ ಚಾಮರಾಜನಗರ ಜಿಲ್ಲಾ ಯುವಘಟಕ ಹಾಗೂ ತಾಲ್ಲೂಕು ಉಸ್ತುವಾರಿ ಬೇರಂಬಾಡಿ ರಂಗಪ್ಪ ನಾಯಕ್ ಆಗ್ರಹಿಸಿದರು.

ರಾಜ್ಯದ ರೈತರು ಈಗಾಗಲೇ ಬರದ ಪರಿಸ್ಥಿತಿಯಿಂದ ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ. ಬೆಳೆಗಳಿಗೆ ಅಗತ್ಯ ಪ್ರಮಾಣದಲ್ಲಿ ನೀರು ದೊರೆಯದೆ ಸಾವಿರಾರು ರೈತರು ಆತಂಕದಲ್ಲಿ ದಿನ ಕಳೆಯುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ರಾಜ್ಯದ ನೀರಿನ ಸಂಗ್ರಹ, ರೈತರ ಅಗತ್ಯ ಹಾಗೂ ಕುಡಿಯುವ ನೀರಿನ ಹಾಹಾಕಾರ ನೀಗಿಸಲು ಪರಿಗಣಿಸದೆ ಹೊರರಾಜ್ಯಕ್ಕೆ ನೀರು ಹರಿಸುವ ನಿರ್ಧಾರ ರೈತರ ಹಿತಕ್ಕೆ ವಿರುದ್ಧವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಕೃಷಿಯನ್ನೇ ನಂಬಿಕೊಂಡು ಬದುಕುತ್ತಿರುವ ಅನ್ನದಾತರು ನೀರಿನ ಕೊರತೆಯಿಂದ ಬೆಳೆ ಉಳಿಸಿಕೊಳ್ಳಲು ಹರಸಾಹಸ ಪಡುತ್ತಿದ್ದಾರೆ.

ಬೆಳೆ ಒಣಗುವ ಭೀತಿ, ಸಾಲದ ಹೊರೆ ಹಾಗೂ ಆರ್ಥಿಕ ಸಂಕಷ್ಟದಿಂದ ರೈತರು ತೀವ್ರ ಮಾನಸಿಕ ಒತ್ತಡಕ್ಕೆ ಒಳಗಾಗಿದ್ದಾರೆ. ಇಂತಹ ಸಂದರ್ಭದಲ್ಲಿ ಸರ್ಕಾರ ರೈತರ ಸಮಸ್ಯೆಗಳಿಗೆ ಸ್ಪಂದಿಸಿ ರಾಜ್ಯದ ನೀರಿನ ಸಂಪನ್ಮೂಲವನ್ನ ರೈತರ ರಕ್ಷಣೆಗೆ ಬಳಸಬೇಕಾಗಿದೆ ಎಂದು ಒತ್ತಾಯಿಸಿದರು.


ಉದಯವಾಹಿನಿ ಚಿತ್ರ

ಕಾವೇರಿ ನದಿ ನೀರಿನ ವಿಚಾರದಲ್ಲಿ ರಾಜ್ಯದ ಹಿತಾಸಕ್ತಿಗೆ ಯಾವುದೇ ಧಕ್ಕೆಯಾಗದಂತೆ ಸರ್ಕಾರ ದೃಢ ನಿಲುವು ತಾಳಬೇಕು. ರಾಜ್ಯದ ಜಲಾಶಯಗಳಲ್ಲಿನ ನೀರಿನ ಲಭ್ಯತೆ, ಮುಂಗಾರು ಪರಿಸ್ಥಿತಿ ಹಾಗೂ ಮುಂದಿನ ದಿನಗಳ ಅಗತ್ಯವನ್ನು ಸಮಗ್ರವಾಗಿ ಪರಿಶೀಲಿಸಿ ಸೂಕ್ತ ನಿರ್ಧಾರ ಕೈಗೊಳ್ಳಬೇಕು. ಮೊದಲು ಕರ್ನಾಟಕದ ರೈತರ ಬೆಳೆಗಳಿಗೆ ನೀರು ಒದಗಿಸಿ, ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಿದ ಬಳಿಕವೇ ಇತರ ರಾಜ್ಯಗಳಿಗೆ ನೀರು ಹರಿಸುವ ಬಗ್ಗೆ ನಿರ್ಧಾರ ಕೈಗೊಳ್ಳುವುದು ನ್ಯಾಯಸಮ್ಮತವಾಗಿರುತ್ತದೆ ಎಂದು ಹೇಳಿದರು. ರಾಜ್ಯದ ಅನ್ನದಾತರ ಬದುಕು ಮತ್ತು ಕೃಷಿ ಉಳಿಸುವುದು ಸರ್ಕಾರದ ಜವಾಬ್ದಾರಿಯಾಗಿದೆ. ರೈತರ ಹಿತಾಸಕ್ತಿಗೆ ವಿರುದ್ಧವಾದ ಯಾವುದೇ ಕ್ರಮ ಕೈಗೊಳ್ಳದೆ, ರಾಜ್ಯದ ಹಕ್ಕು ಮತ್ತು ರೈತರ ಹಿತವನ್ನ ಕಾಪಾಡುವ ನಿಟ್ಟಿನಲ್ಲಿ ಸರ್ಕಾರ ತಕ್ಷಣವೇ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

# ಸ್ವಾಮಿ ವಿವೇಕಾನಂದರ ಭವ್ಯ 'ವಿವೇಕ ಸ್ಮಾರಕ' ನಿರ್ಮಾಣ

• ಉದಯವಾಹಿನಿ, ಮೈಸೂರು


ಉದಯವಾಹಿನಿ ಚಿತ್ರ

1892ರಲ್ಲಿ ಮೈಸೂರಿಗೆ ಸ್ವಾಮಿ ವಿವೇಕಾನಂದರು ಭೇಟಿ ನೀಡಿದ್ದ ಸ್ಥಳ 134 ವರ್ಷ ಪೂರೈಸಲಿದ್ದು, ಇದೀಗ ಅದೇ ಸ್ಥಳದಲ್ಲಿ ಭವ್ಯ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಯುವ ಕೇಂದ್ರ-ವಿವೇಕ ಸ್ಮಾರಕ ನಿರ್ಮಾಣವಾಗಿದೆ. ಶ್ರೀರಾಮಕೃಷ್ಣ ಪರಮಹಂಸರ ಪರಮಶಿಷ್ಯರಾದ ಸ್ವಾಮಿ ವಿವೇಕಾನಂದರು 1892ರ ನವೆಂಬರ್‌ನಲ್ಲಿ ಮೈಸೂರಿಗೆ ಆಗಮಿಸಿ ಎರಡು-ಮೂರು ವಾರ ಉಳಿದುಕೊಂಡು, ಉಪನ್ಯಾಸ ನೀಡಿ, ರಾಜರು, ದಿವಾನರ ಮೆಚ್ಚುಗೆಗೆ ಪಾತ್ರರಾಗಿದ್ದರು. ಇದೀಗ ಅವರು ಉಳಿದುಕೊಂಡ ಪವಿತ್ರ ತಾಣವೊಂದು 'ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಯುವ ಕೇಂದ್ರ -ವಿವೇಕ ಸ್ಮಾರಕ'ವಾಗಿ ಮೈದಳೆದು, ಲೋಕಾರ್ಪಣೆಗೆ ಸಜ್ಜಾಗಿದೆ. ಅನಾಥಾಶ್ರಮ ಅಥವಾ ನಿರಂಜನ ಮಠದಲ್ಲಿ ವಿವೇಕಾನಂದರು ತಂಗಿದ್ದ ತಾಣವನ್ನು ಗುರುತಿಸಲಾಗಿದ್ದು, ಈ ಜಾಗವನ್ನು ಶ್ರೀರಾಮಕೃಷ್ಣ ಆಶ್ರಮಕ್ಕೆ ಹಸ್ತಾಂತರಿಸಲು ಸರ್ಕಾರ ನೀಡಿದ ಸಹಕಾರ, ಎದುರಾದ ವಿಘ್ನಗಳ ನಡುವೆ ವಿವೇಕ ಸ್ಮಾರಕ ಕಟ್ಟಡ ತಲೆ ಎತ್ತಿದೆ.

**ಸ್ವಾಮಿ ವಿವೇಕಾನಂದರ ದಕ್ಷಿಣ ಭಾರತ ಪ್ರವಾಸ:** 1891ರ ಫೆಬ್ರವರಿಯಲ್ಲಿ ಸ್ವಾಮಿ ವಿವೇಕಾನಂದರು ಕಲ್ಕತ್ತಾದ ಕಾಳಿಯ ಕ್ಷೇತ್ರದಿಂದ ಹೊರಟು ಉತ್ತರ ಭಾರತದ ಕ್ಷೇತ್ರಗಳನ್ನು ದರ್ಶಿಸಿದ್ದರು. ಕೆಲವು ರಾಜರ ಸಂದರ್ಶನ ಮಾಡುತ್ತಾ ವೇದಾಂತ ವಿಚಾರದ ಮಹತ್ವ ತಿಳಿಸುತ್ತಾ, ದಕ್ಷಿಣದ ಕಡೆಗೆ ಸಾಗಿ ಬಂದರು. ಪೂನಾದಿಂದ ಕೊಲ್ಲಾಪುರಕ್ಕೆ ಬಂದು, ಅಲ್ಲಿಂದ 1892 ಅಕ್ಟೋಬರ್ 15ರಂದು ಬೆಳಗಾವಿ ತಲುಪಿದ್ದರು. ತದನಂತರ ಗೋವಾಗೆ ತೆರಳಿ, ನಂತರ ಬೆಂಗಳೂರಿಗೆ ಬಂದರು. ವಿವೇಕಾನಂದರು ಬೆಂಗಳೂರಿನಲ್ಲಿ ತಂಗಿದ್ದಾಗ ಮೈಸೂರಿನ ದಿವಾನರಾದ ಸರ್.ಕೆ.ಶೇಷಾದ್ರಿ ಅಯ್ಯರ್ ಗುರುತಿಸಿದ್ದರು.

**ಅನಾಥಾಲಯ-ನಿರಂಜನ ಮಠದಲ್ಲಿ ವಾಸ್ತವ್ಯ:** 1892 ನವೆಂಬರ್ 10ರಂದು ದಿವಾನರು, ಮೈಸೂರಿನ ಮಹಾರಾಜ ಚಾಮರಾಜೇಂದ್ರ ಒಡೆಯರ್ ಮತ್ತು ಬ್ರಿಟಿಷ್ ಅಧಿಕಾರಿ ಲಾನ್ಸ್‌ಡೌನ್ ಅವರೊಂದಿಗೆ ಖೆಡ್ಡಾ ವೀಕ್ಷಣೆಗೆಂದು ಹೆಗ್ಗಡದೇವನಕೋಟೆಗೆ (ಎಚ್.ಡಿ.ಕೋಟೆ) ಹೋಗಿದ್ದರು. ಅದೇ ಸಮಯದಲ್ಲಿ ಸ್ವಾಮಿ ವಿವೇಕಾನಂದರು ದಿವಾನರ ಮನೆಗೆ ಬಂದಿದ್ದರು. ಅಧಿಕಾರಿಗಳಿಂದ ದಿವಾನರು ಮನೆಯಲ್ಲಿ ಇಲ್ಲದಿರುವುದು ಮನವರಿಕೆಯಾಯಿತು. ಆಗ ವಿವೇಕಾನಂದರು ನಾರಾಯಣಶಾಸ್ತ್ರಿ ರಸ್ತೆಯಲ್ಲಿದ್ದ ದಿವಾನರ ಮನೆಗೆ ಹೊಂದಿಕೊಂಡಂತೆ ಹಿಂಬದಿಯಲ್ಲಿದ್ದ ಅಂದಿನ ಅನಾಥಾಶ್ರಮ-ನಿರಂಜನ ಮಠದಲ್ಲೇ ತಂಗಲು ತೀರ್ಮಾನಿಸಿದರು. ಆಗ ಟ್ರಸ್ಟಿ ವೆಂಕಟಕೃಷ್ಣಯ್ಯ (ತಾತಯ್ಯ)ನವರು ವಿವೇಕಾನಂದರನ್ನು ಸ್ವಾಗತಿಸಿ ಉಪಚರಿಸಿದರು. ಆ ಸಂದರ್ಭದಲ್ಲಿ ವಿವೇಕಾನಂದರು ಅರಮನೆಯ ಆತಿಥ್ಯ ಬಯಸದೆ ಅಂದಿನ ಅನಾಥಾಲಯ, ನಿರಂಜನ ಮಠದಲ್ಲೇ ತಂಗಲು ತೀರ್ಮಾನಿಸಿದರು.

**ವೃತ್ತಿಪರ ಕೌಶಲ್ಯಗಳು**

ಇಂಗ್ಲಿಷ್ ಸಂಭಾಷಣೆ ಹಾಗೂ ಸಂವಹನ, ಕನ್ನಡ ಬರವಣಿಗೆಯ ಸಾಮರ್ಥ್ಯ, ಸಾರ್ವಜನಿಕ, ವಿಷಯ ಮಂಡನಾ ಸಾಮರ್ಥ್ಯ, ಪ್ರಧಾನ ಕಂಪ್ಯೂಟರ್ ತಿಳಿವಳಿಕೆ, ಸ್ಪರ್ಧಾತ್ಮಕ ಪರೀಕ್ಷೆಯ ಅಧ್ಯಯನಗಳಿಗೆ ಸೌಕರ್ಯ, ಔದ್ಯೋಗಿಕ ಸಂಬಂಧಿ ಸಲಹೆಗಳು.ಸಾಂಸ್ಕೃತಿಕ ದೃಷ್ಟಿಕೋನದಲ್ಲಿ ಇತಿಹಾಸದ ಅವಲೋಕನ, ಭಾರತದ ಆಧ್ಯಾತ್ಮಿಕ ಆದರ್ಶಗಳ ವಿಶ್ವವಿಶಾಲ ದೃಷ್ಟಿ ಕೋನದ ಅರಿವು, ವಿಶ್ವಶಾಂತಿ ಪ್ರಾರ್ಥನೆಗಳು, ಹಾಡುಗಾರಿಕೆ ಹಾಗೂ ಸಾಂಪ್ರದಾಯಿಕ ವಾದ್ಯಸಂಗೀತಗಳ ತರಬೇತಿ, ಆರೋಗ್ಯಕ್ಕಾಗಿ ಸಾಂಪ್ರದಾಯಿಕ ಮನೆ ಮದ್ದುಗಳ ಅರಿವು ಮೂಡಿಸಲಾಗುವುದು.

ಉದಯವಾಹಿನಿ



## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
| ಗುಳಿಕ ಕಾಲ | ಬೆಳಿಗ್ಗೆ | 06:00 ರಿಂದ 07:30 |
| ಯಮಗಂಡ ಕಾಲ | ಮಧ್ಯಾಹ್ನ | 01:30 ರಿಂದ 03:00 |

**ಮೇಷ** ಆಕರ್ಷಕವಾದ ಮತ್ತು ನಿಮ್ಮನ್ನು ಶಾಂತವಾಗಿರಿಸುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಿ. ಇಂದು ನಿಮ್ಮ ಸಹೋದರ ಸಹೋದರಿಯರು ನಿಮ್ಮಿಂದ ಆರ್ಥಿಕ ಬೆಂಬಲವನ್ನು ಕೇಳಬಹುದು ಮತ್ತು ಅವರಿಗೆ ಸಹಾಯ ಮಾಡಿ ನೀವು ಸ್ವತಃ ಆರ್ಥಿಕ ಒತ್ತಡಕ್ಕೆ ಬರಬಹುದು. ಆದಾಗ್ಯೂ ಪರಿಸ್ಥಿತಿ ಬೇಗ ಸುಧಾರಿಸುತ್ತದೆ.

**ವೃಷಭ** ಇಂದು ನಿಮ್ಮ ವ್ಯಕ್ತಿತ್ವ ಒಂದು ಸುಗಂಧದಂತೆ ಕೆಲಸ ಮಾಡುತ್ತದೆ. ನಕ್ಷತ್ರಪುಂಜಗಳ ಚಾಲನೆ ನಿಮಗಾಗಿ ಉತ್ತಮವಾಗಿಲ್ಲ. ಇಂದಿನ ದಿನ ನೀವು ನಿಮ್ಮ ಹಣವನ್ನು ತುಂಬಾ ಸುರಕ್ಷಿತವಾಗಿಡಬೇಕು. ನಿಮ್ಮ ವಿಪರೀತ ಶಕ್ತಿ ಮತ್ತು ಪ್ರಚಂಡ ಉತ್ಸಾಹ ಅನುಕೂಲಕರ ಫಲಿತಾಂಶಗಳನ್ನು ತರುತ್ತದೆ.

**ಮಿಥುನ** ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ಬಾಕಿಯಿರುವ ವಿಷಯಗಳು ರಹಸ್ಯಮಯವಾಗುತ್ತವೆ ಮತ್ತು ವೆಚ್ಚಗಳು ನಿಮ್ಮ ಮನಸ್ಸನ್ನು ಆವರಿಸಿಕೊಳ್ಳುತ್ತವೆ. ಸ್ನೇಹಿತರು ನಿಮಗೆ ಬೆಂಬಲ ನೀಡಿದರೂ –ಆದರೆ ಮಾತುಗಳ ಬಗ್ಗೆ ಎಚ್ಚರದಿಂದಿರಿ.

**ಕರ್ಕಾಟಕ** ಬಸುರಿಯು ನೆಲದ ಮೇಲೆ ನಡೆದುಕೊಂಡು ಹೋಗುವಾಗ ವಿಶೇಷ ಕಾಳಜಿ ವಹಿಸಬೇಕು. ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ. ನಿಮ್ಮ ಕೋಪವನ್ನು ನಿಯಂತ್ರಿಸಿ ಕುಟುಂಬದ ಸದಸ್ಯರ ಮನ ನೋಯಿಸುವುದನ್ನು ತಪ್ಪಿಸಿ.

**ಸಿಂಹ** ಆಹಾರದ ಸ್ವಾದ ಉಪ್ಪಿನಿಂದ ಬರುವಂತೆ ಅತೃಪ್ತಿಯಿದ್ದಾಗಲೇ ನೀವು ಸಂತೋಷದ ಮೌಲ್ಯವನ್ನು ಅರ್ಥ ಮಾಡಿಕೊಳ್ಳುತ್ತೀರಿ. ಆಪ್ತ ಸ್ನೇಹಿತನ ಸಹಾಯದಿಂದ ಇಂದು ಕೆಲವು ವ್ಯಾಪಾರಿಗಳಿಗೆ ಹಣದ ಲಾಭವಾಗುವ ಸಾಧ್ಯತೆ ಇದೆ. ಈ ಹಣ ನಿಮ್ಮ ಅನೇಕ ಸಮಸೆಗಳನ್ನು ದೂರ ಮಾಡಬಹುದು.

**ಕನ್ಯಾ** ಕಿರಿಕಿರಿ ನಿಮ್ಮ ಮಾನಸಿಕ ಶಾಂತಿಗೆ ತೊಂದರೆ ತಂದರೂ ಒಬ್ಬ ಸ್ನೇಹಿತರು ನಿಮ್ಮ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಅಪಾರವಾದ ಸಹಾಯ ಮಾಡುತ್ತಾರೆ. ಒತ್ತಡ ತೊಡೆದುಹಾಕಲು ಹಿತವಾದ ಸಂಗೀತವನ್ನು ಆಲಿಸಿ. ಪ್ರಾಚೀನ ವಸ್ತುಗಳು ಮತ್ತು ಆಭರಣಗಳಲ್ಲಿ ಹೂಡಿಕೆ ಲಾಭ ಮತ್ತು ಸಮೃದ್ಧಿ ತರುತ್ತದೆ.

**ತುಲಾ** ನಿಮ್ಮ ಪ್ರಚಂಡ ಬೌದ್ಧಿಕ ಸಾಮರ್ಥ್ಯ ಅಂಗವೈಕಲ್ಯದ ವಿರುದ್ಧ ಹೋರಾಡಲು ಸಹಾಯ ಮಾಡುತ್ತದೆ. ಕೇವಲ ಸಕಾರಾತ್ಮಕ ಆಲೋಚನೆಗಳ ಜೊತೆ ಮಾತ್ರ ನೀವು ಈ ಸಮಸ್ಯೆಯ ವಿರುದ್ಧ ಹೋರಾಡಬೇಕು. ಕುಟುಂಬದ ಯಾವುದೇ ಸದಸ್ಯರ ಕಾಯಿಲೆ ಬೀಳುವ ಕಾರಣದಿಂದಾಗಿ ನೀವು ಆರ್ಥಿಕ ತೊಂದರೆಗೊಳಗಾಗಬಹುದು.

**ವೃಶ್ಚಿಕ** ದುಃಖಿತರಾಗಿ ಮತ್ತು ಖಿನ್ನರಾಗಿರಬೇಡಿ. ನೀವು ನಿಮ್ಮ ಇಂದಿನ ದಿನವನ್ನು ಉತ್ತಮಗೊಳಿಸಲು ಕಳೆದ ದಿನಗಳಲ್ಲಿ ಹಣವನ್ನು ಹೂಡಿಕೆ ಮಾಡಿದ್ದರೆ, ಅದರ ಪ್ರಯೋಜನವನ್ನು ಇಂದು ನೀವು ಪಡೆಯಬಹುದು. ನಿಮ್ಮ ಸಂಗಾತಿಯ ಆರೋಗ್ಯದ ನಿಮ್ಮನ್ನು ಚಿಂತೆಗೀಡುಮಾಡಬಹುದು.

**ಧನಸ್ಸು** ಇಂದು ನೀವು ಆರಾಮವಾಗಿರುವ ಭಾವನೆ ಹೊಂದಿರುತ್ತೀರಿ ಮತ್ತು ಆನಂದಿಸಲು ಸೂಕ್ತ ಮನೋಭಾವದಲ್ಲಿರುತ್ತೀರಿ. ಇಂದು ನಿಮ್ಮ ಕಚೇರಿಯ ಸಹೋದ್ಯೋಗಿ ನಿಮ್ಮ ಅಮೂಲ್ಯವಾದ ವಸ್ತುವನ್ನು ಕದಿಯಬಹುದು, ಆದ್ದರಿಂದ ಇಂದು ನೀವು ನಿಮ್ಮ ವಸ್ತುವನ್ನು ಎಚ್ಚರಿಕೆಯಿಂದ ಇಟ್ಟುಕೊಳ್ಳಬೇಕು.

**ಮಕರ** ಅನಂತ ಜೀವನದ ಉತ್ಕೃಷ್ಟ ವೈಭವವನ್ನು ಆನಂದಿಸಲು ನಿಮ್ಮ ಜೀವನವನ್ನು ಹೆಚ್ಚು ಭವ್ಯಗೊಳಿಸಿ. ಚಿಂತೆಯ ಅನುಪಸ್ಥಿತಿ ಈ ದಿಕ್ಕಿನಲ್ಲಿ ಮೊದಲ ಹೆಜ್ಜೆ. ಡೈರಿ ಉದ್ಯಮಕ್ಕೆ ಸೇರಿರುವವರು ಇಂದು ಆರ್ಥಿಕ ಲಾಭವನ್ನು ಪಡೆಯುವ ಪ್ರಬಲ ಸಾಧ್ಯತೆ ಇದೆ. ಕುಟುಂಬದ ಸದಸ್ಯರು ನಿಮ್ಮ ಅಭಿಪ್ರಾಯಗಳನ್ನು ಬೆಂಬಲಿಸುತ್ತಾರೆ.

**ಕುಂಭ** ಸಣ್ಣ ಸಣ್ಣ ವಿಷಯಗಳು ನಿಮ್ಮ ಮನಸ್ಸು ಕೆಡಿಸಲು ಬಿಡಬೇಡಿ. ನೀವು ವಿಪರೀತವಾಗಿ ಖರ್ಚು ಮಾಡುವುದನ್ನು ನಿಲ್ಲಿಸಿದಾಗ ಮಾತ್ರ ನಿಮ್ಮ ಹಣವು ನಿಮ್ಮ ಕೆಲಸಕ್ಕೆ ಬರುತ್ತದೆ, ಇಂದು ನೀವು ಈ ವಿಷಯವನ್ನು ಚೆನ್ನಾಗಿ ಅರ್ಥಮಾಡಿಕೊಳ್ಳಬಹುದು. ಒಬ್ಬ ದೂರದ ಸಂಬಂಧಿಯಿಂದ ಒಂದು ಅನಿರೀಕ್ಷಿತ ಸಂದೇಶ ಇಡೀ ಕುಟುಂಬಕ್ಕೆ ಸಂಭ್ರಮ ತರುತ್ತದೆ.

**ಮೀನ** ಆನಂದಿಸಲು ಸೂಕ್ತ ಮನೋಭಾವದಲ್ಲಿರುತ್ತೀರಿ. ಯಾವುದೇ ದೀರ್ಘಕಾಲೀನ ಹೂಡಿಕೆಗಳನ್ನು ತಪ್ಪಿಸಿ ನಿಮ್ಮ ಸ್ನೇಹಿತರ ಜೊತೆ ಕೆಲವು ಆಹ್ಲಾದಕರ ಕ್ಷಣಗಳನ್ನು ಕಳೆಯಲು ಪ್ರಯತ್ನಿಸಿ. ಸಂಬಂಧಿಗಳಿದ್ದಲ್ಲಿ ಸಣ್ಣ ಪ್ರಯಾಣ ನಿಮ್ಮ ದೈನಂದಿನ ಒತ್ತಡದ ಜೀವನದಿಂದ ನಿಮಗೆ ಸುಖ ಮತ್ತು ವಿಶ್ರಾಂತಿಯನ್ನು ತರುತ್ತದೆ.

# ಸರ್ಕಾರಿ ನ್ಯಾಯಬೆಲೆ ಅಂಗಡಿ ಚಲನಚಿತ್ರ ಬಿಡುಗಡೆ ಸಮಾರಂಭ

• **ಉದಯವಾಹಿನಿ, ಅರಸೀಕೆರೆ**

ನಗರದ ರತ್ನ ಚಲನಚಿತ್ರ ಮಂದಿರದಲ್ಲಿ ಸರ್ಕಾರಿ ನ್ಯಾಯಬೆಲೆ ಅಂಗಡಿ ಎಂಬ ಚಲನಚಿತ್ರ ಇಂದು ಬೆಳಗ್ಗೆ ಬಿಡುಗಡೆ ಸಮಾರಂಭದ ಮೂಲಕ ಚಾಲನೆ ನೀಡಲಾಯಿತು ಸಂಘದ ಅಧ್ಯಕ್ಷ ವೇದಮೂರ್ತಿ ಚಲನಚಿತ್ರದಲ್ಲಿ ಅರಸಿಕೆರೆಯವರಾದ ಹಿರಿಯ ನಟ ದೊಡ್ಡಣ್ಣ ಕುಮಾರ್ ಬಂಗಾರಪ್ಪ ರಾಗಿಣಿ ಅವರು ನಟಿಸಿದ್ದು ಸಂಪೂರ್ಣವಾಗಿ ನ್ಯಾಯಬೆಲೆ ಅಂಗಡಿ ಮಾಲೀಕರ ಸಂಕಷ್ಟಗಳನ್ನು ಮುಂದಿಟ್ಟುಕೊಂಡು ರಾಜ್ಯ ಪಡಿತರ ವಿತರಕರ ಸಂಘದ ಅಧ್ಯಕ್ಷ ಕೃಷ್ಣಪ್ಪ ಉತ್ತಮವಾಗಿ ನಟಿಸಿದ್ದಾರೆ ಹೀಗಾಗಿ ಚಲನಚಿತ್ರ ಶತದಿನೋತ್ಸವ ಆಚರಿಸಲಿ ಎಂದು ಹಾರೈಸಿ ಮಾತನಾಡಿದರು

ಉಪಾಧ್ಯಕ್ಷರಾದ ಚನ್ನಾಪುರ ಶಿವರಾಜ್ ಮಾತನಾಡಿ ನ್ಯಾಯಬೆಲೆ ಅಂಗಡಿ ಮಾಲೀಕರು ಎಂದರೆ ಸಮಾಜದಲ್ಲಿ ತಪ್ಪು ಕಲ್ಪನೆ ಇರುತ್ತದೆ ಅಂಗಡಿ ಮಾಲೀಕರು ಸಹ ತಮ್ಮದೇ ಆದ

☛ ಉದಯವಾಹಿನಿ ಚಿತ್ರ



ರೀತಿಯಲ್ಲಿ ಸಮಾಜ ಸೇವೆಯಂತೆ ಉತ್ತಮವಾಗಿ ಸೇವೆ ಸಲ್ಲಿಸುತ್ತಿದ್ದಾರೆ ಇದನ್ನು ಚಲನಚಿತ್ರದಲ್ಲಿ ಚಲನಚಿತ್ರದ ತಂಡ ನಿರ್ದೇಶಕರು ಮತ್ತು ನಿರ್ಮಾಪಕರು ಉತ್ತಮವಾಗಿ ಚಲನಚಿತ್ರ

**ಚಾಲನೆ ನೀಡಿದ ಆಹಾರ ಇಲಾಖೆ ಶಿರಸ್ತೇದಾರ್**

**ಚಲನಚಿತ್ರ ಬಿಡುಗಡೆ ಪ್ರದರ್ಶನಕ್ಕೆ ಚಾಲನೆ ನೀಡಿದ ಆಹಾರ ಇಲಾಖೆ ಶಿರಸ್ತೇದಾರ್ ಬಾಲಚಂದ್ರ ನ್ಯಾಯಬೆಲೆ ಅಂಗಡಿ ಮಾಲೀಕರ ಕರೆಯ ಮೇರೆಗೆ ಭೇಟಿ ನೀಡಿದ ಆಹಾರ ಇಲಾಖೆ ಅಧಿಕಾರಿಗಳಾದ ಶಿರಸ್ತೇದಾರ್ ಬಾಲಚಂದ್ರ ಆಹಾರ ಇಲಾಖೆ ನಿರೀಕ್ಷಕರಗಳಾದ ಶುಭಶ್ರೀ ಚಿಂತನ್ ಸರ್ಕಾರಿ ನ್ಯಾಯಬೆಲೆ ಅಂಗಡಿ ಚಲನಚಿತ್ರಕ್ಕೆ ಪ್ರದರ್ಶನಕ್ಕೆ ಪೂಜೆ ಸಲ್ಲಿಸುವುದರ ಮುಖಾಂತರ ಚಾಲನೆ ನೀಡಿದರು**

ನಿರ್ಮಾಣ ಮಾಡಿದ್ದಾರೆಂದು ಹೇಳಿದರು ತಳಲುತೊರೆ ಲೋಕೇಶ್. ಅರಸಿಕೆರೆ ನಗರದ ನ್ಯಾಯಬೆಲೆ ಅಂಗಡಿ ಮಾಲೀಕರ ಸಂಘದ ನಿರ್ದೇಶಕರಾದ ಜಾಫರ್ ಉಪಸ್ಥಿತರಿದ್ದರು.

### ಪ್ರತಿನಿತ್ಯ ನೂರಾರು ವಿದ್ಯಾರ್ಥಿಗಳು ಯಾದಗಿರಿ ನಗರದ ವಿವಿಧ ಶಾಲೆ ಹಾಗೂ ಕಾಲೇಜುಗಳಿಗೆ ವಿದ್ಯಾಭ್ಯಾಸಕ್ಕಾಗಿ ತೆರಳುತ್ತಾರೆ

# ಸೂಕ್ತ ಬಸ್ ಸೌಲಭ್ಯಕ್ಕೆ ಆಗ್ರಹಿಸಿ ವಿದ್ಯಾರ್ಥಿಗಳ ರಸ್ತೆ ತಡೆ ಪ್ರತಿಭಟನೆ

• **ಉದಯವಾಹಿನಿ, ಹತ್ತಿಕುಣಿ :**

ಸಮರ್ಪಕ ಬಸ್ ಸೌಲಭ್ಯ ಕಲ್ಪಿಸುವಂತೆ ಆಗ್ರಹಿಸಿ ಯಾದಗಿರಿ ತಾಲ್ಲೂಕಿನ ಹತ್ತಿಕುಣಿ ಗ್ರಾಮದ ವಿದ್ಯಾರ್ಥಿಗಳು ಯಾದಗಿರಿ-ಸೇಡಂ ರಾಜ್ಯ ಹೆದ್ದಾರಿಯಲ್ಲಿ ಸುಮಾರು ಎರಡು ಗಂಟೆಗಳ ಕಾಲ ರಸ್ತೆ ತಡೆ ನಡೆಸಿ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯಿಂದ ಹೆದ್ದಾರಿಯಲ್ಲಿ ವಾಹನ ಸಂಚಾರ ಅಸ್ತವ್ಯಸ್ತಗೊಂಡು ಎರಡೂ ಬದಿಗಳಲ್ಲಿ ವಾಹನಗಳ ಸಾಲು

**1 : ಬಸ್ ನಿಲ್ಲಿಸದೆ ಮುಂದಕ್ಕೆ ತೆರಳುತ್ತಿವೆ**
**2 : ಬಸ್‌ಗಾಗಿ ಕಾಯಬೇಕಾದ ಪರಿಸ್ಥಿತಿ**
**3 : ಹಾಜರಾತಿ ಸಮಸ್ಯೆ ಎದುರಾಗುತ್ತಿದೆ**

ಕಂಡುಬಂತು. ಹತ್ತಿಕುಣಿ ಗ್ರಾಮ ಹೋಬಳಿ ಕೇಂದ್ರವಾಗಿದ್ದು, ಪ್ರತಿನಿತ್ಯ ನೂರಾರು ವಿದ್ಯಾರ್ಥಿಗಳು ಯಾದಗಿರಿ ನಗರದ ವಿವಿಧ ಶಾಲೆ ಹಾಗೂ ಕಾಲೇಜುಗಳಿಗೆ ವಿದ್ಯಾಭ್ಯಾಸಕ್ಕಾಗಿ ತೆರಳುತ್ತಾರೆ. ಆದರೆ ಕಳೆದ ಸುಮಾರು 15 ದಿನಗಳಿಂದ ಬೆಳಗಿನ ವೇಳೆಯಲ್ಲಿ ಸಮರ್ಪಕ ಬಸ್ ಸೌಲಭ್ಯ ಇಲ್ಲದ ಕಾರಣ ವಿದ್ಯಾರ್ಥಿಗಳು ಶಾಲಾ-ಕಾಲೇಜುಗಳಿಗೆ ಸಮಯಕ್ಕೆ ಸರಿಯಾಗಿ ತಲುಪಲು ಸಾಧ್ಯವಾಗುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಯಾದಗಿರಿಯಿಂದ ಸೇಡಂ ಸೇರಿದಂತೆ ವಿವಿಧ ಮಾರ್ಗಗಳಲ್ಲಿ



“ರಾಜ್ಯ ಸರ್ಕಾರದ ಉಚಿತ ಬಸ್ ಯೋಜನೆಗಳಿಂದ ಪ್ರಯಾಣಿಕರ ಸಂಖ್ಯೆ ಹೆಚ್ಚಾಗಿದ್ದರೂ ಹೊಸ ಬಸ್‌ಗಳ ಕೊರತೆ, ಹಳೆಯ ಬಸ್‌ಗಳ ದುರಸ್ತಿ, ಸಿಬ್ಬಂದಿ ಅಭಾವ ಹಾಗೂ ಹದಗೆಟ್ಟ ರಸ್ತೆಗಳ ಕಾರಣ ಸೇವೆ ಮೇಲೆ ಒತ್ತಡ ಹೆಚ್ಚಾಗಿದೆ ಎಂದು ತಿಳಿಸಿದರು. -ಹಿರಿಯ ಅಧಿಕಾರಿ

ಸಂಚರಿಸುವ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಬಸ್‌ಗಳು ಪ್ರಯಾಣಿಕರಿಂದ ತುಂಬಿರುವ ಕಾರಣ ಹತ್ತಿಕುಣಿ ಬಸ್ ನಿಲ್ದಾಣದಲ್ಲಿ ನಿಲ್ಲಿಸದೆ ಮುಂದಕ್ಕೆ ತೆರಳುತ್ತಿವೆ.

ಇದರಿಂದ ವಿದ್ಯಾರ್ಥಿಗಳು ಗಂಟೆಗಟ್ಟಲೆ ಬಸ್‌ಗಾಗಿ ಕಾಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಪರಿಣಾಮ ಶಾಲೆ ಹಾಗೂ ಕಾಲೇಜುಗಳಿಗೆ ತಡವಾಗಿ ಆಗಮಿಸುತ್ತಿದ್ದು, ಹಾಜರಾತಿ ಸಮಸ್ಯೆ ಎದುರಾಗುತ್ತಿದೆ. ಕೆಲ ಸಂದರ್ಭಗಳಲ್ಲಿ ತಡವಾಗಿ ಬಂದ ಕಾರಣ ತರಗತಿಗಳಿಗೆ ಪ್ರವೇಶವೂ ನಿರಾಕರಿಸಲಾಗುತ್ತಿದೆ ಎಂದು ವಿದ್ಯಾರ್ಥಿಗಳು ತಮ್ಮ ಅಳಲು ತೋಡಿಕೊಂಡರು.

ವಿದ್ಯಾರ್ಥಿಗಳ ಸಮಸ್ಯೆಗೆ ಬೆಂಬಲ ಸೂಚಿಸಿ ಗ್ರಾಮದ ಮುಖಂಡರಾದ ಶರಣಪ್ಪಗೌಡ ಮಾಲಿ ಪಾಟೀಲ್, ಭೀಮರೆಡ್ಡಿ ರಾಂಪೂರಹಳ್ಳಿ, ನಾಗಪ್ಪ ಗೋಪಾಳಪುರ, ಅಂಬು ನಾಯಕ,

**ಪ್ರತಿಭಟನೆಯ ಮಾಹಿತಿ ತಿಳಿದು ಗ್ರಾಮೀಣ ಪೊಲೀಸ್ ಠಾಣೆಯ ಪಿಎಸ್‌ಐ ವೀರೇಶ್ ಹಾಗೂ ಸಾರಿಗೆ ಇಲಾಖೆ ಇನ್‌ಸ್ಪೆಕ್ಟರ್ ಬಸಣ್ಣಗೌಡ ಸ್ಥಳಕ್ಕೆ ಆಗಮಿಸಿ ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರೊಂದಿಗೆ ಮಾತುಕತೆ ನಡೆಸಿದರು.**

**ಮೇಲಾಧಿಕಾರಿಗಳೊಂದಿಗೆ ದೂರವಾಣಿ ಮೂಲಕ ಚರ್ಚಿಸಿ ವಿದ್ಯಾರ್ಥಿಗಳ ಬೇಡಿಕೆಯನ್ನು ಶೀಘ್ರದಲ್ಲೇ ಈಡೇರಿಸುವ ಭರವಸೆ ನೀಡಿದ ಬಳಿಕ ಪ್ರತಿಭಟನೆಯನ್ನು ಹಿಂತೆಗೆದುಕೊಳ್ಳಲಾಯಿತು. ನಂತರ ಹೆಚ್ಚುವರಿ ಬಸ್ ವ್ಯವಸ್ಥೆ ಮಾಡಿ ವಿದ್ಯಾರ್ಥಿಗಳನ್ನು ಯಾದಗಿರಿಗೆ ಕಳುಹಿಸಲಾಯಿತು.**

ಮಲ್ಲಿಕಾರ್ಜುನ ಕನ್ನಡಿ, ಹಣಮಂತ ನಾಯಕ ಹಾಗೂ ಶರಣುಗಡೇದ ಪ್ರತಿಭಟನೆಯಲ್ಲಿ ಪಾಲ್ಗೊಂಡರು. ಪ್ರತಿದಿನ ಬೆಳಿಗ್ಗೆ 8.00 ರಿಂದ 8.30ರೊಳಗೆ ಎರಡು ಬಸ್‌ಗಳನ್ನು, ಮಧ್ಯಾಹ್ನ 2 ಗಂಟೆಗೆ ಒಂದು ಬಸ್ ಹಾಗೂ ಸಂಜೆ 5 ಗಂಟೆಗೆ ಮತ್ತೊಂದು ಬಸ್‌ನ್ನು ಹತ್ತಿಕುಣಿ ಮಾರ್ಗದಲ್ಲಿ ಸಂಚರಿಸುವಂತೆ ವ್ಯವಸ್ಥೆ ಮಾಡಿದರೆ ಸಮಸ್ಯೆಗೆ ಶಾಶ್ವತ ಪರಿಹಾರ ದೊರೆಯಲಿದೆ ಎಂದು ಒತ್ತಾಯಿಸಿದರು. ಯಾದಗಿರಿ ಡಿಪೋಗೆ ಹೊಸ ಬಸ್‌ಗಳನ್ನು ಒದಗಿಸಿ, ಖಾಯಂ ಚಾಲಕರು ಹಾಗೂ ನಿರ್ವಾಹಕರನ್ನು ನೇಮಕ ಮಾಡಿದರೆ ಮಾತ್ರ ಇಂತಹ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಸಾಧ್ಯ ಎಂದು ಅಭಿಪ್ರಾಯಪಟ್ಟರು.

## ಅಂತರಾಷ್ಟ್ರೀಯ ಸಮ್ಮೇಳನದ ಪೋಸ್ಟರ್, ವೆಬ್‌ಸೈಟ್ ಅನಾವರಣ

• **ಉದಯವಾಹಿನಿ ಕಲಬುರಗಿ,:**

ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಭೂವಿಜ್ಞಾನ ನಿಕಾಯದ ಭೂಗೋಳಶಾಸ್ತ್ರ ವಿಭಾಗದ ವತಿಯಿಂದ, ಮೆಕ್ಸಿಕೋ ನಗರದ ಅಂತರಶಿಸ್ತೀಯ ಅಧ್ಯಯನ ಕೇಂದ್ರ, ರಾಷ್ಟ್ರೀಯ ಪಾಲಿಟೆಕ್ನಿಕ್ ಸಂಸ್ಥೆ ಮತ್ತು ಪ್ರಾದೇಶಿಕ ಹಾಗೂ ಪರಿಸರ ಸಾಮಾಜಿಕ-ನಗರ ಸಮಸ್ಯೆಗಳ ಕುರಿತಾದ ಅಂತರರಾಷ್ಟ್ರೀಯ ಸಂಶೋಧಕರ ಜಾಲ ಸಹಯೋಗದೊಂದಿಗೆ, ಅಕ್ಟೋಬರ್ 26 ರಿಂದ 30 ರವರೆಗೆ ವಿ.ವಿ.ಯ. ಕ್ಯಾಂಪಸ್ ಆವರಣದಲ್ಲಿ ''ಭೂಮಿಯ ಹವಾಮಾನ ಮತ್ತು ಪರಿಸರ ವ್ಯವಸ್ಥೆಯ ಮೇಲೆ ಮಾನವನ ಪ್ರಭಾವದ ಕುರಿತು ಐದು ದಿನಗಳ ಕಾಲ ಅಂತರರಾಷ್ಟ್ರೀಯ ಸಮ್ಮೇಳನ ನಡೆಯಲಿದೆ.

ಕೇಂದ್ರೀಯ ವಿ.ವಿ.ಯ ಕುಲಪತಿಗಳಾದ ಪ್ರೊ. ಬಟ್ಟು ಸತ್ಯನಾರಾಯಣ ಹಾಗೂ ಕುಲಸಚಿವ ಪ್ರೊ. ಆರ್.ಆರ್. ಬಿರಾದಾರ್ ಅವರು ಅಂತರಾಷ್ಟ್ರೀಯ ಸಮ್ಮೇಳನದ ಪೋಸ್ಟರ್

☛ ಉದಯವಾಹಿನಿ ಚಿತ್ರ



ಬಿಡುಗಡೆ ಹಾಗೂ ಅಧಿಕೃತ ವೆಬ್‌ಸೈಟ್‌ನ್ನು ಅನಾವರಣ ಮಾಡಿದರು. ಈ ಸಂದರ್ಭದಲ್ಲಿ ಭಾರತೀಯ ಸಮ್ಮೇಳನದ ಸಂಚಾಲಕರು ಹಾಗೂ ಭೂವಿಜ್ಞಾನ ನಿಕಾಯದ ಡೀನ್‌ರಾದ ಪ್ರೊ. ಎಂ. ಪ್ರಶಾಂತ್ ಮತ್ತು ಭೂವಿಜ್ಞಾನ ವಿಭಾಗದ ಪ್ರಾಧ್ಯಾಪಕರಾದ ಡಾ. ಬಾಬು ನಲ್ಲುಸಾಮಿ, ಸಮ್ಮೇಳನದ ಸಂಘಟನಾ ಕಾರ್ಯದರ್ಶಿ ಹಾಗೂ ಸಿಯುಕೆ ಭೂವಿಜ್ಞಾನ ಪ್ರಾಧ್ಯಾಪಕರಾದ ಡಾ.ತೇಜಸ್ವಿ ಲಕ್ಕುಂಡಿ ಅವರು ಉಪಸ್ಥಿತರಿದ್ದರು.

## ಮಾದಕ ವ್ಯಸನದಿಂದ ದೂರವಿರಿ: ಕೂನಬೇವ

• **ಉದಯವಾಹಿನಿ ಬಳ್ಳಾರಿ, :**

ತಾಲ್ಲೂಕಿನ ಪಿಡಿ ಹಳ್ಳಿ ಠಾಣೆಯಿಂದ ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಸಾರ್ವಜನಿಕರಲ್ಲಿ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವ ಜಾಥಾ ಇಂದು ನಡೆಯಿತು.ಸಿರುಗುಪ್ಪ ಡಿವೈಎಸ್ಪಿ ಮಾಲತೇಶ್ ಕೂನಬೇವ ಜಾಥಾಗೆ ಚಾಲನೆ ನೀಡಿ, ಯುವಜನತೆ ಡ್ರಕ್ಸ್ ನಂತಹ ಮಾರಕ ಚಟಗಳಿಂದ ದೂರವಿದ್ದು ಶಿಕ್ಷಣ ಮತ್ತು ಉತ್ತಮ ಭವಿಷ್ಯದತ್ತ ಗಮನ ಹರಿಸಬೇಕು ಎಂದು ಕರೆ ನೀಡಿದರು. ಮಾದಕ ವ್ಯಸನ ವ್ಯಕ್ತಿಯ ಆರೋಗ್ಯ, ಕುಟುಂಬ ಹಾಗೂ ಸಮಾಜದ ಮೇಲೆ ಗಂಭೀರ ಪರಿಣಾಮ ಬೀರುತ್ತದೆ. ಡ್ರಗ್ಸ್ ಕುರಿತು ಯಾವುದೇ ಮಾಹಿತಿ ದೊರೆತರೆ ತಕ್ಷಣವೇ ಪೊಲೀಸರಿಗೆ ತಿಳಿಸಬೇಕೆಂದರು.ಬಳ್ಳಾರಿ ಗ್ರಾಮೀಣ ಸಿಪಿಐ ಸುಭಾಷ್ ಪಿ.ಡಿ.ಹಳ್ಳಿ ಪೊಲೀಸ್ ಠಾಣೆಯ ಪಿ.ಎಸ್.ಐ ತಿಮ್ಮಾರೆಡ್ಡಿ, ಜಿಲ್ಲೆಯಲ್ಲಿ ಡ್ರಗ್ಸ್ ಜಾಲವನ್ನು ಸಂಪೂರ್ಣ ನಿರ್ಮೂಲನೆ ಮಾಡಲು ಪೊಲೀಸ್

☛ ಉದಯವಾಹಿನಿ ಚಿತ್ರ




ಇಲಾಖೆ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಂಡಿದ್ದು, ಸಾರ್ವಜನಿಕರ ಸಹಕಾರ ಅತ್ಯಗತ್ಯ ಎಂದರು.

ಈ ಜಾಥಾದಲ್ಲಿ ಕಾಲೇಜು ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿ, ''ಡ್ರಗ್ಸ್ ಬೇಡ ಎನ್ನೋಣ'', ''ಆರೋಗ್ಯಕರ ಜೀವನವೇ ನಮ್ಮ ಗುರಿ'', ''ಮಾದಕ ವ್ಯಸನದಿಂದ ದೂರವಿರಿ'' ಎಂಬ ಘೋಷಣೆಗಳನ್ನು ಕೂಗುತ್ತ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ನಡೆಸಿದರು.

# ಸುತ್ತಿಗೆಯಿಂದ ಹೊಡೆದು ಪತ್ನಿ, 7 ತಿಂಗಳ ಮಗಳನ್ನು ಕೊಂದು ವ್ಯಕ್ತಿ ಪರಾರಿ!

• **ಉದಯವಾಹಿನಿ ಬಳ್ಳಾರಿ:**

ಜಿಲ್ಲೆಯ ಆಂಧ್ರಲ ಪ್ರದೇಶದಲ್ಲಿ ಕೌಟುಂಬಿಕ ಕಲಹದ ಹಿನ್ನೆಲೆಯಲ್ಲಿ ವ್ಯಕ್ತಿಯೊಬ್ಬ ತನ್ನ ಪತ್ನಿ ಮತ್ತು ಏಳು ತಿಂಗಳ ಮಗಳನ್ನು ಸುತ್ತಿಗೆಯಿಂದ ಹೊಡೆದು ಹತ್ಯೆ ಮಾಡಿರುವ ಕೃತ್ಯ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಮೃತರನ್ನು ರಾಜೇಶ್ವರಿ ಮತ್ತು ಅವರ ಏಳು ತಿಂಗಳ ಮಗಳು ಅಶ್ವಿನಿ ಎಂದು ಗುರುತಿಸಲಾಗಿದೆ. ಆರೋಪಿ ಪತಿ ಹೊನ್ನೂರು ಸ್ವಾಮಿ, ಕೃತ್ಯ ಎಸಗಿದ ನಂತರ ಸ್ಥಳದಿಂದ ಪರಾರಿಯಾಗಿದ್ದಾನೆ ಎಂದು ಹೇಳಲಾಗಿದೆ. ಕಳೆದ ಕೆಲವು ದಿನಗಳಿಂದ ಆ ಕುಟುಂಬದಲ್ಲಿ ಜಗಳಗಳು ನಡೆಯುತ್ತಿದ್ದವು. ತಡರಾತ್ರಿ ಈ ಜಗಳ ತೀವ್ರಗೊಂಡು, ಆರೋಪಿ ಈ ಭೀಕರ ಕೃತ್ಯ ಎಸಗಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಆರೋಪಿ ತನ್ನ ಪತ್ನಿ ಮತ್ತು ಮಗುವಿನ ಮೇಲೆ ಸುತ್ತಿಗೆಯಿಂದ ಹಲ್ಲೆ ನಡೆಸಿದ್ದು, ಇಬ್ಬರೂ ಸ್ಥಳದಲ್ಲೇ ಸಾವಿಗೀಡಾಗಿದ್ದಾರೆ ಎಂದು ಆರೋಪಿಸಲಾಗಿದೆ.

ಘಟನೆ ಬಗ್ಗೆ ಮಾಹಿತಿ ಲಭ್ಯವಾಗುತ್ತಿದ್ದಂತೆಯೇ, ಎಪಿಎಂಸಿ ಪೊಲೀಸ್ ಠಾಣೆಯ ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದ್ದಾರೆ. ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ರವಾನಿಸಲಾಗಿದೆ.

ಈ ಕೊಲೆಗಳ ಹಿಂದಿನ ನಿಖರವಾದ ಉದ್ದೇಶ ಇನ್ನೂ ತಿಳಿದುಬಂದಿಲ್ಲ. ಈ ಸಂಬಂಧ ಪ್ರಕರಣ ದಾಖಲಿಸಲಾಗಿದ್ದು, ತಲೆಮರೆಸಿಕೊಂಡಿರುವ ಆರೋಪಿ ಹೊನ್ನೂರು ಸ್ವಾಮಿಗಾಗಿ ಶೋಧ ಕಾರ್ಯ ಆರಂಭಿಸಲಾಗಿದೆ. ವಿವಿಧ ಆಯಾಮಗಳಲ್ಲಿ ತನಿಖೆ ನಡೆಸುತ್ತಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

## ಪದವಿ ವಿದ್ಯಾರ್ಥಿಗಳ ಶುಲ್ಕ ಹೆಚ್ಚಳ ಖಂಡಿಸಿ ಆ. 5ರಂದು ವಿ.ಶ್ರೀ.ಕೃ ವಿಶ್ವವಿದ್ಯಾಲಯ ಚಲೋ

• **ಉದಯವಾಹಿನಿ ಬಳ್ಳಾರಿ, :**

ವಿಜಯನಗರ ಜಿಲ್ಲೆಯಲ್ಲಿ ಪದವಿ ಕಾಲೇಜುಗಳ ದ್ವಿತೀಯ ಹಾಗೂ ತೃತೀಯ ವರ್ಷದ ಪ್ರವೇಶಾತಿ ಶುಲ್ಕ ಹೆಚ್ಚಳ ಮಾಡಿರುವುದನ್ನು ಖಂಡಿಸಿ ಆ.5ರಂದು ವಿ.ಶ್ರೀ.ಕೃ ವಿಶ್ವವಿದ್ಯಾಲಯ ಚಲೋ ನಡೆಸುವುದಾಗಿ ಎಐಡಿಎಸ್‌ಓ ರಾಜ್ಯ ಖಜಾಂಚಿ ಸುಭಾಷ್ ಬೆಟ್ಟದಕೊಪ್ಪ ತಿಳಿಸಿದರು.

ನಗರದಲ್ಲಿಂದು ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡುತ್ತಾ, ಬಳ್ಳಾರಿಯ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ ಕೆಳಗಡೆ ಬರುವ ಪದವಿ ಕಾಲೇಜುಗಳ 202627ನೇ ಶೈಕ್ಷಣಿಕ ಸಾಲಿನ ದ್ವಿತೀಯ ಹಾಗೂ ತೃತೀಯ ವರ್ಷದ ವಿದ್ಯಾರ್ಥಿಗಳ ಪ್ರವೇಶಾತಿ ಶುಲ್ಕ ಹಿಂದಿನ ವರ್ಷಕ್ಕಿಂತ ಈ ವರ್ಷ ರೂ. 1,300, ವಿವಿ ಅಭಿವೃದ್ಧಿ ಶುಲ್ಕ ರೂ. 100 ಹೆಚ್ಚಿಗೆ ಮಾಡಿರುವುದು ವಿದ್ಯಾರ್ಥಿಗಳಲ್ಲಿ ಉನ್ನತ ಶಿಕ್ಷಣ ಮುಂದುವರಿಸಬೇಕಾ ಅನ್ನುವ ಪ್ರಶ್ನೆ? ಕಾಡುತ್ತಿದೆ ಎಂದರು.

☛ ಉದಯವಾಹಿನಿ ಚಿತ್ರ




ಯಾಕೆಂದರೆ 2024-25ನೇ ಸಾಲಿನಲ್ಲಿ ವಿದ್ಯಾರ್ಥಿಗಳು ಪ್ರವೇಶಾತಿ ಶುಲ್ಕ ರೂ.3,490 ಕಟ್ಟಿದ್ದಾರೆ. 2025-26ನೇ ಸಾಲಿನ ವಿದ್ಯಾರ್ಥಿಗಳು ರೂ.3739 ಶುಲ್ಕ ಪಾವತಿಸಿದ್ದಾರೆ. ಆದರೆ ಈಗ 2026-27ನೇ ಸಾಲಿನಲ್ಲಿ ವಿದ್ಯಾರ್ಥಿಗಳಿಂದ ರೂ. 5,039 ಶುಲ್ಕವನ್ನು, ಅಂದರೆ ವಿವಿ ಅಭಿವೃದ್ಧಿ ಶುಲ್ಕ ರೂ.100 ಸೇರಿದಂತೆ ಈ ವರ್ಷವೇ ರೂ.1,400 ವಿದ್ಯಾರ್ಥಿಗಳಿಂದ ವಸೂಲಿ ಮಾಡುತ್ತಿರುವುದು ಅತ್ಯಂತ

**ವಿಶ್ವವಿದ್ಯಾಲಯಗಳನ್ನು ಉಳಿಸಲು ಸರ್ಕಾರ ಅನುದಾನ ನೀಡಬೇಕು ಎಂದು ಸರ್ಕಾರಕ್ಕೆ ಕೂಡ ಎಐಡಿಎಸ್‌ಓ ಆಗ್ರಹಿಸುತ್ತದೆ. ಹಾಗೆ ಹೆಚ್ಚಿಸಿರುವ ಪೂರ್ಣ ಪ್ರಮಾಣದ ಶುಲ್ಕ ಹಿಂಪಡೆಯಬೇಕು ಎಂದು ವಿ.ಶ್ರೀ.ಕೃ ವಿವಿಗೆ ಆಗ್ರಹಿಸಿದರು.**

ವಿದ್ಯಾರ್ಥಿ ವಿರೋಧಿ ನೀತಿಯಾಗಿದೆ.

ಬಳ್ಳಾರಿ ನಗರದ ಎಸ್.ಜಿ.ಆರ್.ಸಿ.ಎಮ್ ಸರ್ಕಾರಿ ವಾಣಿಜ್ಯ ಮತ್ತು ನಿರ್ವಹಣೆ ಕಾಲೇಜಿನ ವಿದ್ಯಾರ್ಥಿಗಳು ದ್ವಿತೀಯ ಹಾಗೂ ತೃತೀಯ ವರ್ಷದ ವರ್ಷದ ಬಿಎಸ್ಸಿ ಪದವಿ ವಿದ್ಯಾರ್ಥಿಗಳು ಕಾಲೇಜು ಶುಲ್ಕ ಸೇರಿದಂತೆ ಶುಲ್ಕ ರೂ.6,655 ಹಾಗೂ ಬಿಎ, ಬಿಕಾಂ ಬಿಬಿಎಂ ಬಿಸಿಎ ರೂ.6382, ಪಾವತಿಸಬೇಕಾಗಿದೆ. ಕುರುಗೋಡು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪದವಿ ವಿದ್ಯಾರ್ಥಿಗಳು ಕಾಲೇಜು ಶುಲ್ಕ ಸೇರಿದಂತೆ ಬಿಎ, ಬಿಕಾಂ ರೂ.6,248 ಕಟ್ಟುವ ಪರಿಸ್ಥಿತಿ ಉಂಟಾಗಿದೆ.

## ಸುಳ್ಳು ವಿಜೃಂಭಿಸಬಹುದು, ಆದರೆ ಸತ್ಯವನ್ನು ಅಳಿಸಲು ಸಾಧ್ಯವಿಲ್ಲ

• **ಉದಯವಾಹಿನಿ ಕಲಬುರಗಿ,**

ಕಾಂಗ್ರೆಸ್ ಪಕ್ಷ ಮತ್ತು ಕಾಂಗ್ರೆಸ್ ನಾಯಕರ ತೇಜೋವಧೆಗೆ ಬಿಜೆಪಿ ಬಳಸಿದ ವಾಮಮಾರ್ಗಗಳು ಒಂದೆರಡಲ್ಲ, ಸತ್ಯವನ್ನು ಸೋಲಿಸಲು ಸಾಧ್ಯವಿಲ್ಲದಿದ್ದರೂ, ಸುಳ್ಳು ಸೃಷ್ಟಿಸುವ ಅನಾಹುತಗಳು ಭೀಕರ ಪರಿಣಾಮಗಳನ್ನು ಉಂಟುಮಾಡುತ್ತವೆ. ಬಿಜೆಪಿ ಮಾಡಿದ ಆರೋಪಗಳು ನಿರಾಧಾರ ಎಂಬುದು ನ್ಯಾಯಾಲಯದಲ್ಲಿ ನಿರೂಪಿತವಾಗಿದ್ದು ಈಗ ಇತಿಹಾಸ, ಅಂತೆಯೇ ಕಲ್ಲಿದ್ದಲು ಹಂಚಿಕೆಯಲ್ಲಿ ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ಮೇಲೆ ಬಿಜೆಪಿ ಹೊರಿಸಿದ್ದ ಆರೋಪದಲ್ಲೂ ಈಗ ಸತ್ಯದ ಅನಾವರಣವಾಗಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಈ ಸಂಬಂಧ ಟ್ವೀಟ್ ಮಾಡಿರುವ ಅವರು, ದೇಶ ಕಂಡಂತಹ ಸುಶಿಕ್ಷಿತ, ಸಭ್ಯ ,ಸೌಮ್ಯ ಸ್ವಭಾವದ ಮನಮೋಹನ್ ಸಿಂಗ್ ಅವರ ''ಪ್ರಾಮಾಣಿಕತೆ''ಗೆ ಬಿಜೆಪಿ ಇಟ್ಟಿದ್ದ ಕಪ್ಪು ಚುಕ್ಕೆಗೆ ಈಗ ಮುಕ್ತಿ ಸಿಕ್ಕಿದೆ. ಆದರೆ ಅವರಂತಹ ಮೇಧಾವಿ ಆಡಳಿತಗಾರರನ್ನು ಕಳೆದುಕೊಂಡ ದೇಶ ಈಗ ದುಷ್ಪರ ಪರಿಣಾಮಗಳನ್ನು ಎದುರಿಸುತ್ತಿದೆ. ಸುಳ್ಳುಗಳ ಮಹಲು ಹೆಚ್ಚು ದಿನ ನಿಲ್ಲುವುದಿಲ್ಲ ಎನ್ನುವುದು ಪದೇ ಪದೇ ಸಾಬೀತಾಗುತ್ತಲೇ ಇದೆ.

## 1.46 ಲಕ್ಷ ರೂ.ಮೌಲ್ಯದ ಚಿನ್ನ, ಬೆಳ್ಳಿ ಕಳವು

• **ಉದಯವಾಹಿನಿ ಕಲಬುರಗಿ,-**

ಮನೆ ಬಾಗಿಲು ಕೊಂಡಿ ಮುರಿದು 1.46 ಲಕ್ಷ ರೂ.ಮೌಲ್ಯದ ಚಿನ್ನ ಮತ್ತು ಬೆಳ್ಳಿ ಕಳವು ಮಾಡಿರುವ ಘಟನೆ ನಗರದ ರಾಣೇಸ್ಪೀರ ದರ್ಗಾ ರಸ್ತೆಯ ಶ್ರೀರಾಮ ನಗರದಲ್ಲಿ ನಡೆದಿದೆ. ಶರಣಬಸಪ್ಪ ಹೂಗಾರ ಎಂಬುವವರ ಮನೆ ಬಾಗಿಲು ಕೊಂಡಿ ಮುರಿದು ಕಳ್ಳರು 70 ಸಾವಿರ ರೂ.ಮೌಲ್ಯದ 15 ಗ್ರಾಂ.ಬಂಗಾರದ ಬ್ರಾಸಲೇಟ್, 70 ಸಾವಿರ ರೂ.ಮೌಲ್ಯದ 15 ಗ್ರಾಂ.ಬಂಗಾರದ ಲಾಕೆಟ್, 6 ಸಾವಿರ ರೂ.ಮೌಲ್ಯದ 100 ಗ್ರಾಂ.ಬೆಳ್ಳಿಯ ಗಣೇಶ ಮೂರ್ತಿ ಸೇರಿ 1.46 ಲಕ್ಷ ರೂ.ಮೌಲ್ಯದ ಬಂಗಾರ ಮತ್ತು ಬೆಳ್ಳಿ ಕಳವು ಮಾಡಿದ್ದಾರೆ. ಪತ್ನಿ ಮಕ್ಕಳೊಂದಿಗೆ ತವರು ಮನೆಯಾದ ಆಳಂದಗೆ ಹೋಗಿದ್ದು, ಇವರು ಮನೆಗೆ ಬೀಗ ಹಾಕಿಕೊಂಡು ಕೆಲಸಕ್ಕೆ ಹೋದ ಸಂದರ್ಭದಲ್ಲಿ ಕಳ್ಳರು ಮನೆ ಕಳವು ಮಾಡಿದ್ದಾರೆ ಎಂದು ತಿಳಿದುಬಂದಿದೆ. ಈ ಬಗ್ಗೆ ಸಬ್-ಅರ್ಬನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

## ಪಾಂಡುರಂಗನ ನಾಮಸ್ಮರಣೆಯೊಂದಿಗೆ ಮೊಳಗಿದ ಭವ್ಯ ಪಲ್ಲಕ್ಕಿ ಮೆರವಣಿಗೆ

☛ ಉದಯವಾಹಿನಿ ಚಿತ್ರ



• **ಉದಯವಾಹಿನಿ ಬೀದರ್**

ಐತಿಹಾಸಿಕ ಹಿನ್ನೆಲೆಯುಳ್ಳ ಬೀದರ್ ನಗರದ ಪುರಾತನ ಶ್ರೀ ಪಾಂಡುರಂಗ ದೇವಸ್ಥಾನದಲ್ಲಿ ಕಳೆದ ಎಂಟು ದಿನಗಳಿಂದ ನಡೆಯುತ್ತಿದ್ದ ಆಷಾಢ ಸಪ್ತಾಹ ಧಾರ್ಮಿಕ ಮಹೋತ್ಸವವು ಭಕ್ತಿ, ಧಾರ್ಮಿಕ ಉತ್ಸಾಹ ಹಾಗೂ ಸಾಂಸ್ಕೃತಿಕ ವೈಭವದೊಂದಿಗೆ ಅತ್ಯಂತ ವಿಜೃಂಭಣೆಯಿಂದ ಸಂಪನ್ನಗೊಂಡಿತು. ಸಮಾರೋಪ ಅಂಗವಾಗಿ ನಡೆದ ವಿಶೇಷ ಪೂಜೆ, ಭವ್ಯ ಪಲ್ಲಕ್ಕಿ ಉತ್ಸವ, ದಹಿ ಹಂಡಿ, ಹರಿನಾಮ ಸಂಕೀರ್ತನೆ, ವಿವಿಧ ಭಜನಾ ಮಂಡಳಿಗಳ ಭಜನೆ, ಯುವಕ-ಯುವತಿಯರ ಪುಗಡಿ ನೃತ್ಯ ಹಾಗೂ ಮಹಾಪ್ರಸಾದ ಕಾರ್ಯಕ್ರಮಗಳಲ್ಲಿ ಸಾವಿರಾರು ಭಕ್ತರು ಭಾಗವಹಿಸಿ ಶ್ರೀ ಪಾಂಡುರಂಗನ ದರ್ಶನ ಪಡೆದು ಆಶೀರ್ವಾದ ಪಡೆದರು.

ಬೆಳಗ್ಗೆಯಿಂದಲೇ ದೇವಸ್ಥಾನದಲ್ಲಿ ವಿಶೇಷ ಪೂಜೆ, ಪಂಚಾಮೃತ ಅಭಿಷೇಕ, ತುಳಸಿ ಅರ್ಚನೆ, ವೇದಮಂತ್ರೋಚ್ಚಾರಣೆ, ಅಲಂಕಾರ ಸೇವೆ ಮಹಾಮಂಗಳಾರತಿ ನೆರವೇರಿತು. ಮುಂಜಾನೆಯೇ ದೇವಸ್ಥಾನಕ್ಕೆ ಆಗಮಿಸಿದ ಭಕ್ತರು ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು. ಮಹಿಳೆಯರು ಸಾಂಪ್ರದಾಯಿಕ ಉಡುಪಿನಲ್ಲಿ ಹಾಗೂ ಕುಟುಂಬ ಸಮೇತ ಆಗಮಿಸಿದ ಭಕ್ತರು ಭಕ್ತಿಭಾವದಿಂದ ಕಾರ್ಯಕ್ರಮದಲ್ಲಿ ಪಾಲ್ಗೊಂಡರು. ಮಧ್ಯಾಹ್ನ ಶ್ರೀ ಪಾಂಡುರಂಗನ ಉತ್ಸವ ಮೂರ್ತಿಯನ್ನು ಸುಂದರ ಹೂವಿನ ಅಲಂಕಾರದಿಂದ ಸಿಂಗರಿಸಲಾದ ಪಲ್ಲಕ್ಕಿಯಲ್ಲಿ ಪ್ರತಿಷ್ಠಾಪಿಸಿ ಭವ್ಯ ಮೆರವಣಿಗೆಗೆ ಚಾಲನೆ ನೀಡಲಾಯಿತು.

ದೇವಸ್ಥಾನದಿಂದ ಆರಂಭವಾದ ಪಲ್ಲಕ್ಕಿ ಉತ್ಸವ ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಭಕ್ತರ ಗಮನ ಸೆಳೆಯಿತು. ಮೆರವಣಿಗೆ ಸಾಗಿದ ಮಾರ್ಗದುದ್ದಕ್ಕೂ ಭಕ್ತರು ಹೂವಿನ ಮಳೆಗರೆದು, ತೆಂಗಿನಕಾಯಿ ಒಡೆದು, ಆರತಿ ಬೆಳಗಿ ಹಾಗೂ ''ವಿಠ್ಠಲ ವಿಠ್ಠಲ ಪಾಂಡುರಂಗ'', ''ಜೈ ಜೈ ರಾಮ ಕೃಷ್ಣ ಹರಿ'' ಎಂಬ ಜಯಘೋಷಗಳೊಂದಿಗೆ ಭಕ್ತಿಭಾವದಿಂದ ಸ್ವಾಗತಿಸಿದರು. ಅನೇಕ ಕಡೆಗಳಲ್ಲಿ ಭಕ್ತರು ಪಲ್ಲಕ್ಕಿಗೆ ಪೂಜೆ ಸಲ್ಲಿಸಿ ಹಣ್ಣು, ಹೂವು ಹಾಗೂ ಪ್ರಸಾದ ಸಮರ್ಪಿಸಿದರು.

## ಕಾವೇರಿ ನೀರು ಹಂಚಿಕೆ ವಿವಾದ: AC ರೂಮ್ ನಲ್ಲಿ ಕೂತು ತೀರ್ಮಾನ ಸರಿಯಲ್ಲ- ಹೆಚ್.ಡಿ. ಕುಮಾರಸ್ವಾಮಿ

• **ಉದಯವಾಹಿನಿ ಹಾಸನ:**



☛ ಉದಯವಾಹಿನಿ ಚಿತ್ರ

ತಮಿಳುನಾಡಿಗೆ ನೀರು ಹರಿಸುವಂತೆ ಕಾವೇರಿ ನೀರು ನಿರ್ವಹಣಾ ಸಮಿತಿ ನೀಡಿದ್ದ ಆದೇಶ ಎತ್ತಿಹಿಡಿದಿರುವ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ವಿರುದ್ಧ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಕಿಡಿಕಾರಿದ್ದಾರೆ. ಈ ಕುರಿತು ಮಾತನಾಡಿರುವ ಅವರು ದೆಹಲಿಯ ಎಸಿ ರೂಮ್ ಗಳಲ್ಲಿ ಕೂತು ಈ ನಿರ್ಧಾರವನ್ನ ತೆಗೆದುಕೊಳ್ಳುವ ಬದಲು, ಸಿಡಬ್ಲ್ಯುಎಂಎ ಸದಸ್ಯರು ಕರ್ನಾಟಕ ಮತ್ತು ತಮಿಳುನಾಡಿನ ಜಲಾಶಯಗಳಾದ ಕೆಆರ್‌ಎಸ್, ಹಾರಂಗಿ, ಕಬಿನಿ, ಹೇಮಾವತಿ ಮತ್ತು ಮೆಟ್ಟೂರು ಪ್ರದೇಶಗಳಿಗೆ ಭೇಟಿ ನೀಡಿ, ವಾಸ್ತವ ಪರಿಸ್ಥಿತಿಯನ್ನು ಪರಿಶೀಲಿಸಿ ಆ ನಂತರ ನಿರ್ಧರಿಸಿ ಎಂದು ಸಲಹೆ ನೀಡಿದರು. ಕರ್ನಾಟಕದಲ್ಲಿ ಸದ್ಯ ಲಭ್ಯವಿರುವ 54 ರಿಂದ 55 ಟಿಎಂಸಿ ನೀರಲ್ಲಿ, 10 ಟಿಎಂಸಿ ಡೆಡ್ ಸ್ಟೋರೇಜ್ ಆಗಿದೆ. ಉಳಿದ 44 ಟಿಎಂಸಿಯಲ್ಲಿ ಬೆಂಗಳೂರು ನಗರದ ಕುಡಿಯುವ ನೀರಿಗಾಗಿ 30 ಟಿಎಂಸಿ ಮತ್ತು ಪರಿಸರ ಸಂರಕ್ಷಣೆಗೆ 10 ಟಿಎಂಸಿ ಅಗತ್ಯವಿದೆ. ಇಂತಹ ಸಂದರ್ಭದಲ್ಲಿ, ಮುಂದೆ ಹರಿಯುವ ನೀರನ್ನು ಆಧರಿಸಿ, ಅಂದಾಜು ಲೆಕ್ಕಾಚಾರದ ಮೇಲೆ ನೀರು ಬಿಡುಗಡೆ ಮಾಡಲು ಆದೇಶಿಸುವುದು ಸರಿಯಲ್ಲ ಎಂದು ಹೆಚ್ ಡಿಕೆ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

# ಸರಳಾದೇವಿ ಕುರುಗೋಡು ಡಿಗ್ರಿ ಕಾಲೇಜ್‌ಗಳಲ್ಲಿ ನಕಲಿ ಪಿಹೆಚ್‌ಡಿ ಪ್ರಮಾಣ ಪತ್ರ !

### ಕುರುಗೋಡು ಸರ್ಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ 2009-10 ರಿಂದ ಇಲ್ಲಿವರೆಗೆ ಇತಿಹಾಸ ಉಪನ್ಯಾಸಕರಾಗಿ ಎಂ.ರಾಮಯ್ಯ ಸೇವೆಸಲ್ಲಿದ್ದರು

• **ಉದಯವಾಹಿನಿ ಬಳ್ಳಾರಿ, :**

ನಗರದ ಸರಳಾದೇವಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಓರ್ವ ಇಂಗ್ಲೀಷ್ ಉಪನ್ಯಾಸಕಿ, ಹಾಗು ಕುರುಗೋಡಿನ ಪ್ರಥಮ ದರ್ಜೆ ಕಾಲೇಜಿನ ಓರ್ವ ಇತಿಹಾಸ ಉಪನ್ಯಾಸಕ ಸೇರಿ ರಾಜ್ಯದಲ್ಲಿ

**1 : ಬಳ್ಳಾರಿ ಜಿಲ್ಲೆಯಲ್ಲಿ ಇಬ್ಬರು**
**2 : ವಿಜಯನಗರ ಜಿಲ್ಲೆಯಲ್ಲಿ 9 ಜನರು**
**3 : ರಾಜ್ಯದಲ್ಲಿ 249 ಜನರು**

249 ಅತಿಥಿ ಉಪನ್ಯಾಸಕರು ನಕಲಿ ಪಿಹೆಚ್ ಡಿ ಪ್ರಮಾಣ ಪತ್ರ ನೀಡಿ ಅರೆ ಕಾಲಿಕ ಉಪನ್ಯಾಸಕರಾಗಿ ನೇಮಕಗೊಂಡಿದ್ದರು. ಇದನ್ನು ಪತ್ತೆ ಹಚ್ಚಿ ಸೇವೆಯಿಂದ ವಜಾಗೊಳಿಸಿ, ಮುಂದಿನ ನೇಮಕಾತಿಗಳಲ್ಲಿ ಕಪ್ಪು ಪಟ್ಟಿಗೆ ಸೇರಿಸುವಂತೆ ಕಾಲೇಜು ಶಿಕ್ಷಣ ಇಲಾಖೆ ಆದೇಶ ಹೊರಡಿಸಿದೆ.

ನೆಟ್ ಸ್ಲೆಟ್ ಪಿಹೆಚ್ಡಿ ಪಡೆದವರು ಮಾತ್ರ ಪದವಿ ಕಾಲೇಜುಗಳ ಅರೆ ಕಾಲಿಕ ಉಪನ್ಯಾಸಕರಾಗಬೇಕು ಎಂಬ ಯುಜಿಸಿ ನಿಯಮಾವಳಿ ಹಿನ್ನಲೆಯಲ್ಲಿ ರಾಜ್ಯದಲ್ಲೂ ಹಲವು ವರ್ಷಗಳ ಕಾಲ ಪದವಿ ಕಾಲೇಜುಗಳಲ್ಲಿ ಅರೆ ಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸದವರು ಕೆಲಸ ಹೋಗುತ್ತದೆ ಎಂಬ ಕಾರಣಕ್ಕೆ ನಕಲಿ ಪಿಹೆಚ್ಡಿ ಸರ್ಟಿಫಿಕೇಟ್

☛ ಉದಯವಾಹಿನಿ ಚಿತ್ರ




“ಈ ರೀತಿ ನಕಲಿ ಸರ್ಟಿಫಿಕೇಟ್ ನೀಡಿ ಪಾಠ ಮಾಡುವ ಉಪನ್ಯಾಸಕರ ಮೇಲೆ ಕಾನೂನು ಕ್ರಮ ಆಗದಿದ್ದರೆ ಮುಂದೆ ಬರುವವರು ಸಹ ಇದೇ ರೀತಿಮಾಡುವ ಸಾಧ್ಯರೆ ಇದೆ. ಇದರಲ್ಲಿ ಮಾನವೀಯತೆ ಏಕೆ ಬೇಕು ಎಂಬುದು ಜನರ ಆಗ್ರಹವಾಗಿದೆ.

ತಂದು ಸಲ್ಲಿಸಿದ್ದರು.ಈ ಬಗ್ಗೆ ಅನುಮಾನಗೊಂಡ ಉನ್ನತ ಶಿಕ್ಷಣ ಇಲಾಖೆ ಪರಿಶೀಲನೆ ಮಾಡಿ ಇಲಾಖೆಯ ಆಯುಕ್ತ ನಿರ್ಧಾರ ಗೋಪಾಲಕೃಷ್ಣ ಅವರು ಈ ಆದೇಶ ಹೊರಡಿಸಿದ್ದಾರೆ. ಹೊಸಪೇಟೆ ನಗರದ ಶ್ರೀ ಶಂಕರ್ ಆನಂದಸಿಂಗ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಅತಿಥಿ ಉಪನ್ಯಾಸಕರ ಸಂಘದ ಜಿಲ್ಲಾ ಅಧ್ಯಕ್ಷ, ಇತಿಹಾಸ ವಿಭಾಗದ ಡಾ. ಗುಜಲ್ ಹುಲುಗಪ್ಪ, ಕಂಪ್ಯೂಟರ್ ಸೈನ್ಸ್ ವಿಭಾಗದ ಬಸವರಾಜ.ಕೆ. ಸಮಾಜಶಾಸ್ತ್ರ ವಿಭಾಗದ ಬಸವಲಿಂಗ.ಹೆಚ್, ಇಂಗ್ಲಿಷ್ ವಿಭಾಗದ ಮುಬೀನಾ ಎಂ.ಎಸ್, ಗಣಿತಶಾಸ್ತ್ರ ವಿಭಾಗದ ಬನ್ನಾರಿ ನಕಲಿ ದಾಖಲೆಗಳನ್ನು ಸಲ್ಲಿಸಿ ಸರ್ಕಾರಕ್ಕೆ ಮತ್ತು ಇಲಾಖೆಗೆ ವಂಚನೆ ಮಾಡಿದ್ದಾರೆ. ಹೈದರಾಬಾದ್ ಕರ್ನಾಟಕದ ಜಿಲ್ಲೆಗಳಾದ ಕಲಬುರಗಿ: 33, ಯಾದಗಿರಿ: 31,ಬೀದರ್ 28, ರಾಯಚೂರು: 24,ಕೊಪ್ಪಳ 13 ಉಪನ್ಯಾಸಕರು ನಕಲಿಪ್ರಮಾಣ ಪತ್ರ ಸಲ್ಲಿಸಿದ್ದಾರೆ.

ಇವರ ವಿರುದ್ಧ ಒಂದು ವಾರದೊಳಗೆ ಸ್ಥಳೀಯ ಪೊಲೀಸ್ ಠಾಣೆಗಳಲ್ಲಿ ಕ್ರಿಮಿನಲ್ ಮೊಕದ್ದಮೆ ದಾಖಲು ಆಯುಕ್ತರು ಆದೇಶ ಮಾಡಿದ್ದರು. ಆದರೆ ನಕಲಿ ಪ್ರಮಾಣ ಪತ್ರ ಸಲ್ಲಿಸಿ ಮಕ್ಕಳಿಗೆ ಪಾಠ ಮಾಡಿದವರು ಆಯುಕ್ತರ ಬಳಿ ತೆರಳಿ ಆಗಿರುವ ತಪ್ಪನು ಮಾನವೀಯತೆಯಿಂದ ಪರಿಗಣಿಸಿ ಕ್ರಿಮಿನಲ್ ಕೇಸು ದಾಖಲಿಸಿದಂತೆ ಮನವಿ ಮಾಡಿದ್ದಾರಂತೆ. ಅದಕ್ಕಾಗಿ ಆಯುಕ್ತರು ಮತ್ತೊಮ್ಮೆ ಪರಿಶೀಲನೆ ಮಾಡುವ ಎಂದು ಹೇಳಿ ಸಧ್ಯ ಕೇಸು ದಾಖಲಿಸಲು ಇನ್ನು ಲಿಖಿತ ಆದೇಶ ಕಳಿಸಿಲ್ಲವಂತೆ.

**ಕಳೆದ ನಾಲ್ಕು ವರ್ಷದಿಂದ ಬೋಯಾ ಸಂಧ್ಯಾ ಅವರು ಸರಳಾದೇವಿ ಕಾಲೇಜಿನಲ್ಲಿ ಅರೆ ಕಾಲಿಕ ಉಪನ್ಯಾಸಕರಾಗಿದ್ದರು. ಇವರು ರಾಜಸ್ಥಾನದ ಸನ್ ರೈಸ್ ವಿವಿಯಿಂದ ಪಿಹೆಚ್ಡಿ ಪಡೆದಿದ್ದರು. ಈ ವಿವಿ ಈ ಹಿಂದೆ ಇತ್ತು. ಆದರೆ ಕಳೆದ ಮೂರು ವರ್ಷಗಳ ಹಿಂದೆ ಈ ವಿವಿಯನ್ನು ಯುಜಿಸಿ ರದ್ದು ಮಾಡಿದೆ.**

**ಇನ್ನು ಕುರುಗೋಡು ಸರ್ಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ 2009-10 ರಿಂದ ಇಲ್ಲಿವರೆಗೆ ಇತಿಹಾಸ ಉಪನ್ಯಾಸಕರಾಗಿ ಎಂ.ರಾಮಯ್ಯ ಸೇವೆಸಲ್ಲಿದ್ದರು. ಇವರು ಮಗಧ ವಿವಿಯಿಂದ ಪಿಹೆಚ್ ಡಿಪದವಿ ಪಡೆದಿರುವುದಾಗಿ ಪ್ರಮಾಣ ಪತ್ರ ಸಲ್ಲಿಸಿ 30 ರಿಂದ 40 ಸಾವಿರ ರೂಪಾಯಿಗಳ ವರೆಗೆ ಸಂಬಳ ಪಡೆದಿದ್ದರು.**